ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

EMAIL : dairyadadaari@gmail.com ಸಂಪುಟ: 01 ಸಂಚಿಕೆ: 72

ಬೆಲೆ ರೂ : 2.00

ರಾಯಚೂರು

ಪುಟ: 4

DAIRYADA DAARI NEWS PAPER

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಭಾನುವಾರ: 22-02-2026

**SEHRI & IFTARI TIME**

DAY : SUNDAY
RAMZAN : 04
DATE: 22.02.2026
END TIME OF SEHRI :5:27 AM
FAJAR AZAAN : 5:32 AM

IFTAR TIME : 6:28 PM

ಸೈಯದ್ ಅಹ್ಮದ್ ಹುಸೇನಿ ಮತ್ ವಾಲೆ
ಕಾರ್ಯದರ್ಶಿಗಳು : ಮತ್ ವಾಲೆ
ಸಾಹೇಬ್ ಪಬ್ಲಿಕ್ ಸ್ಕೂಲ್ ಮಾನ್ವಿ
ಸಂಪಾದಕರು : ಧೈರ್ಯದ ದಾರಿ ಕನ್ನಡ
ದಿನಪತ್ರಿಕೆ



ಸುದ್ದಿ ಮತ್ತು
ಜಾಹೀರಾತಿಗಾಗಿ
ಸಂಪರ್ಕಿಸಿ
6360866626

# ಶಾಸಕ ಬೈರತಿ ಬಸವರಾಜ್ ಜೈಲಿಗೆ

**ಬೆಂಗಳೂರು, ಫೆ.21–** ರೌಡಿ ಶಿವಕುಮಾರ್ ಅಲಿಯಾಸ್ ಬಿಕ್ಲು ಶಿವ ಹತ್ಯೆ ಪ್ರಕರಣದಲ್ಲಿ ಐದನೇ ಆರೋಪಿ ಶಾಸಕ ಹಾಗೂ ಮಾಜಿ ಸಚಿವ ಬೈರತಿ ಬಸವರಾಜು ಅವರಿಗೆ ನಗರದ ನ್ಯಾಯಾಲಯವು ಇದೇ ಫೆಬ್ರವರಿ 26ರವರೆಗೆ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿ ಆದೇಶ ಹೊರಡಿಸಿದೆ.

ಕಸ್ಟಡಿ ಮುಕ್ತಾಯಗೊಂಡ ಹಿನ್ನೆಲೆಯಲ್ಲಿ ಶಾಸಕ ಬಸವರಾಜ್ ಅವರನ್ನು ನಗರದ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಇಂದು ಸಿಐಡಿ ಅಧಿಕಾರಿಗಳು ಹಾಜರುಪಡಿಸಿದ್ದು, ನ್ಯಾಯಾಧೀಶರು ಫೆಬ್ರವರಿ 26ರವರೆಗೆ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿ ಆದೇಶಿಸಿದ್ದಾರೆ.ಬೈರತಿ ಬಸವರಾಜು ಅವರನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ ಸಿಐಡಿ ಅಧಿಕಾರಿಗಳು, 'ಆರೋಪಿ ತನಿಖೆಗೆ ಪೂರ್ಣ ಪ್ರಮಾಣದಲ್ಲಿ ಸಹಕಾರ ನೀಡುತ್ತಿಲ್ಲ. ಪ್ರಕರಣದ ಆಳವಾದ ವಿಚಾರಣೆ ನಡೆಸಲು ಇನ್ನೂ ಕಾಲಾವಕಾಶದ ಅಗತ್ಯವಿದೆ, ಆದ್ದರಿಂದ ಹೆಚ್ಚಿನ ದಿನಗಳ ಕಾಲ ಕಸ್ಟಡಿಗೆ ನೀಡಬೇಕು' ಎಂದು ಮನವಿ ಮಾಡಿದರು. ಆದರೆ, ಇದಕ್ಕೆ ಬೈರತಿ ಪರ ವಕೀಲರು ತೀವ್ರ ವಿರೋಧ ವ್ಯಕ್ತಪಡಿಸಿದರು. ಈಗಾಗಲೇ 9 ದಿನಗಳ ಕಾಲ ಕಸ್ಟಡಿಯಲ್ಲಿ ಇರಿಸಿಕೊಳ್ಳಲಾಗಿದೆ, ಶಾಸಕರ ಆರೋಗ್ಯ ಹದಗೆಟ್ಟಿರುವುದರಿಂದ ಇನ್ನು ಮುಂದೆ ಕಸ್ಟಡಿಗೆ ನೀಡುವುದು ಸರಿಯಲ್ಲ ಎಂದು ವಾದಿಸಿದರು.



ವಿಚಾರಣೆ ವೇಳೆ ಶಾಸಕರ ಆರೋಗ್ಯದ ಬಗ್ಗೆ ನ್ಯಾಯಾಧೀಶರು ಮಾಹಿತಿ ಕೇಳಿದರು. ಭೈರತಿ ಬಸವರಾಜು ಅವರಿಗೆ ಹೃದಯ ಸಂಬಂಧಿ ಸಮಸ್ಯೆ ಇರುವ ಕಾರಣ ಜಯದೇವ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗಿದೆ ಎಂದು ಸಿಐಡಿ ಪರ ವಕೀಲರು ಕೋರ್ಟ್‌ಗೆ ತಿಳಿಸಿದರು. ಈ ವೇಳೆ ಬೈರತಿ ಪರ ವಕೀಲರು, 'ಜೈಲಿನಲ್ಲಿ ಹೃದಯ ಸಂಬಂಧಿ ಸಮಸ್ಯೆಗಳಿಗೆ ಚಿಕಿತ್ಸೆ ನೀಡುವ ತಜ್ಞ ವೈದ್ಯರಿಲ್ಲ. ಜನರಲ್ ಫಿಸಿಶಿಯನ್ ಹೃದಯದ ಸಮಸ್ಯೆಯನ್ನು ಹೇಗೆ ನಿಭಾಯಿಸಲು ಸಾಧ್ಯ?' ಎಂದು ಪ್ರಶ್ನಿಸಿ ಆಸ್ಪತ್ರೆಯಲ್ಲಿಯೇ ಮುಂದುವರಿಸುವಂತೆ ಕೇಳಿಕೊಂಡರು.

## ಮನೆ ಊಟಕ್ಕೆ ಒಪ್ಪದ ಕೋರ್ಟ್:

ಇದೇ ವೇಳೆ ಭೈರತಿ ಬಸವರಾಜು ಅವರಿಗೆ ಜೈಲಿನಲ್ಲಿ 'ಮನೆ ಊಟ' ನೀಡುವಂತೆ ಕೋರಿ ಅರ್ಜಿ ಸಲ್ಲಿಸಲಾಗಿತ್ತು. ಆದರೆ, ಹೈಕೋರ್ಟ್‌ನ ಇತ್ತೀಚಿನ ಕಠಿಣ ಆದೇಶಗಳನ್ನು ಉಲ್ಲೇಖಿಸಿದ ನ್ಯಾಯಾಧೀಶರು, ಮನೆ ಊಟದ ಮನವಿಯನ್ನು ನೇರವಾಗಿ ತಿರಸ್ಕರಿಸಿದರು. 'ಜಯದೇವ ಆಸ್ಪತ್ರೆಯ ವೈದ್ಯರು ಸೂಚಿಸಿರುವ ಆಹಾರದ ಪಟ್ಟಿಯನ್ನು ಜೈಲಿನ ಅಧಿಕಾರಿಗಳು ಅನುಸರಿಸಬೇಕು. ವೈದ್ಯರು ಸೂಚಿಸಿದ ರೀತಿಯ ಪಥ್ಯದ ಆಹಾರವನ್ನು ಜೈಲಿನಲ್ಲೇ ತಯಾರಿಸಿ ನೀಡಬೇಕು' ಎಂದು ನ್ಯಾಯಾಲಯ ಕಟ್ಟುನಿಟ್ಟಿನ ಸೂಚನೆ ನೀಡಿದೆ. ವಾದ–ಪ್ರತಿವಾದಗಳನ್ನು ಆಲಿಸಿದ ನ್ಯಾಯಾಲ ಯವು ಬೈರತಿ ಬಸವರಾಜು ಅವರನ್ನು ಫೆಬ್ರವರಿ 26ರವರೆಗೆ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ. ತೀರ್ಪು ಹೊರಬೀಳುತ್ತಿದ್ದಂತೆಯೇ ಶಾಸಕರನ್ನು ನಗರದ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹಕ್ಕೆ ಶಿಫ್ಟ್ ಮಾಡಲಾಗಿದೆ.

### ಅಂತರರಾಷ್ಟ್ರೀಯ ಮಾತೃ ಭಾಷೆ ದಿನ

## "ಕನ್ನಡ– ಕನ್ನಡಿಗ ಕರ್ನಾಟಕ ಉಳಿಯಬೇಕು": ಡಾ.ಜೆ.ಎಲ್.ಈರಣ್ಣ



ಧೈರ್ಯದ ದಾರಿ

**ಮಾನ್ವಿ,ಫೆ.21–**ಶನಿವಾರದಂದು ನಗರದ ಬಾಷುಮಿ ಯಾ ಸಾಹುಕಾರ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮಾನ್ವಿಯಲ್ಲಿ "ಅಂತರರಾಷ್ಟ್ರೀಯ ಮಾತೃಭಾಷೆ ದಿನ" ವನ್ನು ಆಚರಿಸಲಾಯಿತು.

ಈ ಕಾರ್ಯಕ್ರಮ ಅಧ್ಯಕ್ಷತೆವಸಿ ಮಾತನಾಡಿ ಪ್ರಾಂಶುಪಾಲರಾದ ಜೆ.ಎಲ್.ಈರಣ್ಣ ನವರು ನಮ್ಮ ದೇಶವು ಬಹುಭಾಷೆಗಳ ದೇಶ, ನಾವೆಲ್ಲರೂ ಬಹು ಭಾಷಾ ಸಂಸ್ಕೃತಿಯನ್ನು ನಾವೆಲ್ಲರೂ ಗೌರವಿಸಬೇಕು ಅದರೊಂದಿಗೆ ನಮ್ಮ ನಮ್ಮ ರಾಜ್ಯಗಳ ಮಾತೃಭಾಷೆಗಳನ್ನು ಪ್ರೀತಿಸಬೇಕು ಮಾತೃ ಭಾಷೆ ಮಗುವಿನ ಸರ್ವತೋಮುಖ ಅಭಿವೃದ್ಧಿಗೆ ಪೂರಕವಾಗಿದೆ ಆದ್ದರಿಂದ ಶಿಕ್ಷಣ ಮಾತೃಭಾಷೆಯಲ್ಲಿ ನೀಡಬೇಕು ಆದ್ದರಿಂದ ನಮ್ಮ ಮಾತೃಭಾಷೆಯಾದ ಕನ್ನಡದ ಭಾಷೆಯ ಮೇಲೆ ಪ್ರೀತಿ ಗೌರವ ಅಭಿಮಾನ ಬೆಳೆಸಿಕೊಳ್ಳಬೇಕು ಕರ್ನಾಟಕದಲ್ಲಿ ಕನ್ನಡ ಕನ್ನಡಿಗ ಕರ್ನಾಟಕ ಉಳಿಯಬೇಕಾದರೆ ಕನ್ನಡ ಉಳಿದರೆ ಎಲ್ಲವೂ ಉಳಿತವೆ ಆದರಿಂದ ನಾವೆಲ್ಲರೂ ಕನ್ನಡ ಮಾತನಾಡುವುದರಿಂದ ಇದು ಸಾಧ್ಯ ಎಂದರು.

ಕಾರ್ಯಕ್ರಮವು ಆಂತರಿಕ ಗುಣಮಟ್ಟ ಭರವಸಾ ಕೋಶ ಮತ್ತು ಆಂಗ್ಲ ಭಾಷಾ ವಿಭಾಗದ ಸಂಯು ಕ್ತಾಶ್ರಯದಲ್ಲಿ ನಡೆಯಿತು.

ಕಾರ್ಯಕ್ರಮದ ಪ್ರಸ್ತಾವಿಕ ನುಡಿಯನ್ನು ಆಂಗ್ಲ ಭಾಷಾ ವಿಭಾಗದ ಮುಖ್ಯಸ್ಥರಾದ ಸೈಯದ್ ಮುಜೀಬ್ ಅಹ್ಮದ್ ಅಂತರರಾಷ್ಟ್ರೀಯ ಮಟ್ಟದಲ್ಲಿ ಪ್ರತಿ ಭಾಷೆ ಉಳಿವು ಬಹುಮುಖ್ಯ, 1952 ರಲ್ಲಿ ಬಾಂಗ್ಲಾದೇಶದಲ್ಲಿ ಬಂಗಾಳಿ ಭಾಷೆಗಾಗಿ ನಡೆದ ಡಾಕಾ ವಿಶ್ವವಿದ್ಯಾಲಯದ ವಿದ್ಯಾರ್ಥಿ ಮತ್ತು ಹೋರಾಟಗಾರರ ಹೋರಾಟವು ಅಂದು ಬಹಳ ಜನರ ಸಾವಿಗೂ ಕಾರಣವಾಯಿತು. ಯುನೆಸ್ಕೋ ಈ ಘನೆಯನ್ನು ಗುರುತಿಸಿ ಫೆಬ್ರವರಿ 21 ರಂದು ಅಂತರರಾಷ್ಟ್ರೀಯ ಮಾತೃಭಾಷೆ ದಿನ ಎಂದು 1999 ರಲ್ಲಿ ಘೋಷಿಸಿತು, 2000 ಇಸ್ವಿಯಿಂದ ಇಲ್ಲಿಯವರಿಗೆ ಆಚರಣೆ ಮುಂದುವರೆದಿದೆ ಎಂದು ಐತಿಹಾಸಿಕ ಹಿನ್ನೆಲೆಯನ್ನು ತಿಳಿಸಿದರು.

ಕಾರ್ಯಕ್ರಮದಲ್ಲಿ ಪ್ರಾಧ್ಯಾಪಕರುಗಳಾದ ಸೈಯದ್ ಮಿನ್ಹಾಜ ಉಲ್ ಹಸನ್, ರವಿ.ಎಂ., ಚನ್ನಬಸವ ಮಾಡಗಿರಿ, ಶಶಿಧರ್, ಚನ್ನಬಸಪ್ಪ ಮತ್ತು ಇನ್ನಿತರ ವಿಭಾಗದ ಉಪನ್ಯಾಸಕರು ಉಪಸ್ಥಿತರಿದ್ದರು.

ಕಾರ್ಯಕ್ರಮದ ನಿರೂಪಣೆ ಮತ್ತು ಸ್ವಾಗತವನ್ನು ಕನ್ನಡ ವಿಭಾಗದ ಬಸವರಾಜ ಸುಂಕೇಶ್ವರ ಮತ್ತು ವಂದನಾರ್ಪಣೆಯನ್ನು ಇತಿಹಾಸ ವಿಭಾಗದ ಮಲ್ಲಿಕಾರ್ಜುನ ಮಡಿವಾಳ ಅವರು ಮಾಡಿದರು.

## ಮಾಹಿತಿ ಹಕ್ಕು ಕಾಯ್ದೆ ಜನಪರ, ಪ್ರಬಲ ಕಾಯ್ದೆಯಾಗಿದೆ: ಮಾಹಿತಿ ಆಯೋಗದ ಕಲಬುರಗಿ ಪೀಠದ ಆಯುಕ್ತ ಬಿ. ವೆಂಕಟ್ ಸಿಂಗ್



ಧೈರ್ಯದ ದಾರಿ

**ರಾಯಚೂರು ಫೆ,21–** ಮಾಹಿತಿ ಹಕ್ಕು ಕಾಯ್ದೆ ಜನಪರ ಮತ್ತು ಪ್ರಬಲ ಕಾಯ್ದೆಯಾಗಿದ್ದು, ಪಾರದ'ರ್ಶಕ ಆಡಳಿತ ವ್ಯವಸ್ಥೆಯನ್ನು ಜಾರಿಗೊಳಿಸುವಲ್ಲಿ ಪ್ರಮುಖವಾಗಿ ಕಾರ್ಯನಿರ್ವಹಿಸುತ್ತದೆ. ಸಾರ್ವ ಜನಿಕ ಸೇವೆಯಲ್ಲಿರುವವರಿಗೆ ಮಾಹಿತಿ ಹಕ್ಕು ಕಾಯ್ದೆಯು ರಕ್ಷಣೆಯೂ ಹೌದು, ಎಚ್ಚರಿಕೆಯೂ ಹೌದು ಎಂದು ಕರ್ನಾಟಕ ರಾಜ್ಯ ಮಾಹಿತಿ ಆಯೋಗದ ಕಲಬುರಗಿ ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ಬಿ. ವೆಂಕಟ್ ಸಿಂಗ್ ಹೇಳಿದರು.

ಕೊಪ್ಪಳ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲನಲ್ಲಿ ಫೆ.21ರಂದು ಕೊಪ್ಪಳ ಜಿಲ್ಲೆಯ ಎಲ್ಲಾ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ಮಾಹಿತಿ ಹಕ್ಕು ಕಾಯ್ದೆಯ ಕುರಿತು ಹಮ್ಮಿಕೊಂಡಿದ್ದ ಕಾರ್ಯಾಗಾರ ಹಾಗೂ ಸಂವಾದ ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ಮಾಹಿತಿ ಹಕ್ಕು ಕಾಯ್ದೆಯ ಮುಖ್ಯ ಉದ್ದೇಶ ಸರ್ಕಾರದ ಆಡಳಿತದಲ್ಲಿ ಸಾರ್ವಜನಿಕರು ಭಾಗವ ಹಿಸುವುದಾಗಿದೆ. ಸರಕಾರದ ಯೋಜನೆ ಕುರಿತು ಸಾರ್ವಜನಿಕರು ಮಾಹಿತಿ ಪಡೆಯಲು ಈ ಕಾಯ್ದೆ ಯಡಿ ಅವಕಾಶವಿದೆ. ಇದರಿಂದ ಜನರಿಗೆ ಸರ್ಕಾ ರದ ಯೋಜನೆಗಳ ಮಾಹಿತಿ ತಿಳಿಯುವುದರ ಜೊತೆಗೆ ಆಡಳಿತದಲ್ಲಿ ಪಾರದರ್ಶಕತೆ ತರಬಹು ದಾಗಿದೆ. ಈ ಕಾಯ್ದೆ ಬಂದು 20 ವರ್ಷಗಳಾದರೂ ಬಹಳಷ್ಟು ಅಧಿಕಾರಿಗಳಿಗೆ ಕಾಯ್ದೆ ಅನುಷ್ಠಾನದಲ್ಲಿ ಮಾಹಿತಿ ಕೊರತೆ ಇದೆ. ಹಾಗಾಗಿ ಜಿಲ್ಲಾ ಮತ್ತು ತಾಲ್ಲೂಕು ಹಾಗೂ ಗ್ರಾಮ ಪಂಚಾಯತಿ ಮಟ್ಟದ ಅಧಿಕಾರಿಗಳಿಗೆ ಮಾಹಿತಿ ಹಕ್ಕು ಕಾಯ್ದೆ ಕುರಿತ ಪುಸ್ತಕವನ್ನು ಎಲ್ಲರಿಗೂ ತಲುಪಿಸುವ ಕೆಲಸ ಮಾಡಬೇಕು ಎಂದು ಹೇಳಿದರು.

ಕಲ್ಬುರ್ಗಿ ಪೀಠ ಆರಂಭವಾದ ಬಳಿಕ 16640 ಪ್ರಕರಣ ದಾಖಲಾಗಿ ಇಲ್ಲಿಯವರೆಗೆ 10,423 ಪ್ರಕರಣಗಳನ್ನು ವಿಲೇವಾರಿ ಮಾಡಲಾಗಿದೆ. ತಾವು ಈ ಕಲಬುರಗಿ ಪೀಠದ ಮಾಹಿತಿ ಆಯುಕ್ತರಾಗಿ ಅಧಿಕಾರ ಸ್ವೀಕರಿಸಿದ 3 ತಿಂಗಳ ಅವಧಿಯಲ್ಲಿ 1,400 ಪ್ರಕರಣಗಳನ್ನು ವಿಚಾರಣೆ ಮಾಡಿ 605 ಪ್ರಕರಣಗಳನ್ನು ವಿಲೇವಾರಿ ಮಾಡಿದ್ದು, 6,655 ಪ್ರಕರಣಗಳು ಇನ್ನೂ ವಿಲೇವಾರಿಗೆ ಬಾಕಿ ಇದ್ದು, ಆದ್ಯತೆ ಮೇರೆಗೆ ಸೋಮವಾರದಿಂದ ಶುಕ್ರವಾರ ರ್ಜಿಗಳನ್ನು ವಿಲೇವಾರಿ ಮಾಡಲಾಗುತ್ತಿದೆ ಎಂದು ಅವರು ತಿಳಿಸಿದರು. ಕೊಪ್ಪಳ ಜಿಲ್ಲೆಯಲ್ಲಿ 764 ಪ್ರಕರಣಗಳು ಬಾಕಿ ಇವೆ. ಕಲ್ಯಾಣ ಕರ್ನಾಟಕದ ಜಿಲ್ಲೆಗಳಲ್ಲಿ ರಾಯ ಚೂರು ಜಿಲ್ಲೆಯಲ್ಲಿ ಅತಿ ಹೆಚ್ಚು ಮತ್ತು ಬೀದರ ಜಿಲ್ಲೆಯಲ್ಲಿ ಅತಿ ಕಡಿಮೆ ಪ್ರಕರಣಗಳು ಇವೆ. ಇದುವರೆಗೂ ದ್ವಿತೀಯ ಮೇಲ್ಮನವಿ ವಿಚಾರಣೆಗೆ ಅರ್ಜಿದಾರರು ಹಾಗೂ ಅಧಿಕಾರಿಗಳು ಬೆಂಗಳೂರಿಗೆ ಹೋಗಬೇಕಿತ್ತು. ಆದರೆ ಫೆಬ್ರವರಿ ಯಿಂದ ಆಯೋಗದ ಕಲಬುರಗಿ ಪೀಠದಲ್ಲಿ ದ್ವಿತೀಯ ಮೇಲ್ಮನವಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾ ಗಿದ್ದು, ಕಲ್ಯಾಣ ಕರ್ನಾಟಕದ ಎಲ್ಲ 7 ಜಿಲ್ಲೆಗಳ ಜನರಿಗೆ ಇದರಿಂದ ಅನುಕೂಲವಾಗಲಿದೆ ಎಂದು ಅವರು ಹೇಳಿದರು.

ಕರ್ನಾಟಕ ರಾಜ್ಯ ಮಾಹಿತಿ ಆಯೋಗ 2ನೇಪುಟಕ್ಕೆ►

## ಫಿರ್ದೋಸ್ ಕಬರಸ್ತಾನ್ ಹಾಗೂ 80 ವರ್ಷ ಹಳೆಯ ಈದ್ಗಾಕ್ಕೆ ತಡೆಗೋಡೆ ನಿರ್ಮಾಣ: ಸಂಸದರಿಗೆ ಮನವಿ



ಧೈರ್ಯದ ದಾರಿ

**ಸಿರವಾರ,ಫೆ.21–** ಸ್ಥಳೀಯ ಮುಸ್ಲಿಂ ಸಮಾಜದ ವತಿಯಿಂದ ನಗರದ ಪ್ರಮುಖ ಸ್ಮಶಾನವಾದ ಫಿರ್ದೋಸ್ ಕಬರಸ್ತಾನ್ ಹಾಗೂ ಸುಮಾರು 80 ವರ್ಷಗಳ ಇತಿಹಾಸವಿರುವ ಪುರಾತನ ಈದ್ಗಾ ಮೈದಾನಕ್ಕೆ ಸುಸಜ್ಜಿತ ಕಾಂಪೌಂಡ್ ಗೋಡೆ ನಿರ್ಮಿಸಿಕೊಡುವಂತೆ ಕೋರಿ ಮಾನ್ಯ ಸಂಸದರಿಗೆ ಮನವಿ ಪತ್ರ ಸಲ್ಲಿಸಲಾಯಿತು. ಸಮಾಜದ ಮುಖಂಡರು ಸಂಸದರನ್ನು ಭೇಟಿ ಮಾಡಿ, ಈ ಧಾರ್ಮಿಕ ಸ್ಥಳಗಳ ರಕ್ಷಣೆಯ ಅಗತ್ಯತೆಯ ಬಗ್ಗೆ ಸುದೀರ್ಘವಾಗಿ ಚರ್ಚಿಸಿದರು.ಅತಿಕ್ರಮಣ ತಡೆ: ಕಾಂಪೌಂಡ್ ಗೋಡೆ ಇಲ್ಲದ ಕಾರಣ ಸ್ಮಶಾನದ ಜಾಗ ಅತಿಕ್ರಮಣವಾಗುವ ಭೀತಿ ಎದುರಾಗಿದೆ.ಪಾವಿತ್ರ್ಯತೆ ರಕ್ಷಣೆ: ಗೋಡೆ ಇಲ್ಲದ ಕಾರಣ ಜಾನುವಾರುಗಳು ಮೈದಾನದ ಒಳಗೆ ನುಗ್ಗುತ್ತಿದ್ದು, ಈದ್ಗಾ ಹಾಗೂ ಕಬರಸ್ತಾನ್‌ನ ಪಾವಿತ್ರ್ಯತೆಗೆ ಧಕ್ಕೆಯಾಗುತ್ತಿದೆ. **ಶತಮಾನದ ಇತಿಹಾಸ:** ಈ ಈದ್ಗಾ ಮೈದಾನವು ಸುಮಾರು 80 ವರ್ಷಗಳಷ್ಟು ಹಳೆಯದಾಗಿದ್ದು, ಇದನ್ನು ಸಂರಕ್ಷಿಸುವುದು ಇಂದಿನ ತುರ್ತು ಅಗತ್ಯವಾಗಿದೆ ಎಂದು ಮನವಿಯಲ್ಲಿ ವಿವರಿಸಲಾಗಿದೆ."ನಮ್ಮ ಹಿರಿಯರು ನಿರ್ಮಿಸಿದ ಈ ಐತಿಹಾಸಿಕ ಈದ್ಗಾ ಮತ್ತು ಕಬರಸ್ತಾನ್ ರಕ್ಷಣೆ ಮಾಡುವುದು ಸಮಾಜದ ಪ್ರಮುಖ ಬೇಡಿಕೆಯಾಗಿದೆ. ಸಂಸದರು ತಮ್ಮ ವಿಶೇಷ ಅನುದಾನದಡಿ ಈ ಕಾಮಗಾರಿಯನ್ನು ಕೈಗೆತ್ತಿಕೊಳ್ಳಬೇಕು," ಎಂದು ಮುಸ್ಲಿಂ ಸಮಾಜದ ಮುಖಂಡರು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಪ. ಪಂ. ಅಧ್ಯಕ್ಷರಾದ ಹಾಜಿ ಚೌದ್ರಿ.ಎಂ. ಡಿ. ಹುಸೇನ್. ಹಬೀಬ್ ಬಡೆಘರ್. ಎಲ್. ಐ. ಸಿ. ಇಬ್ರಾಹಿಂ.ಬಂದೇನವಾಜ್. ಎಂ. ಡಿ. ಹುಸೇನ್ ಬಡೆಘರ್. ಇನ್ನಿತರ ಉಪಸ್ಥಿತರಿದ್ದರು

## ಸ್ಕೌಟ್ ಗೈಡ್ ಭವನದ ಶಂಕುಸ್ಥಾಪನೆ

ಧೈರ್ಯದ ದಾರಿ



**ಮಾನ್ವಿ,ಫೆ.21–** ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಕರ್ನಾಟಕ,ಜಿಲ್ಲಾ ಸಂಸ್ಥೆ ರಾಯಚೂರು ಹಾಗೂ ಸ್ಥಳೀಯ ಸಂಸ್ಥೆ ಮಾನ್ವಿ ಇವರುಗಳ ಸಂಯುಕ್ತಾಶ್ರಯದಲ್ಲಿ ತಾಲೂಕ ಸರಕಾರಿ ಆಸ್ಪತ್ರೆಯ ಮುಂಭಾಗದಲ್ಲಿ ಸ್ಥಳೀಯ ಸಂಸ್ಥೆ ಮಾನ್ವಿ ಸ್ಕೌಟ್ಸ್ ಮತ್ತು ಗೈಡ್ಸ್ ತರಬೇತಿ ಕೇಂದ್ರದ ಕಟ್ಟಡ ಶಂಕು ಸ್ಥಾಪನೆ ಸಮಾರಂಭವನ್ನು

ಸನ್ಮಾನ್ಯ ಎನ್.ಎಸ್ ಬೋಸರಾಜು ಮಾನ್ಯ ಸಣ್ಣ ನೀರಾವರಿ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಕರ್ನಾಟಕ ಸರ್ಕಾರ ಹಾಗೂ ಅಧ್ಯಕ್ಷರು ಜಿಲ್ಲಾ ಸಂಸ್ಥೆ ರಾಯಚೂರು ಇವರು ಗುದ್ದಲಿ ಪೂಜೆ ಮಾಡುವ ಮೂಲಕ ತರಬೇತಿ ಕೇಂದ್ರದ ಕಟ್ಟಡ ಶಂಕುಸ್ಥಾಪನೆ ನೆರವೇರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು ತಾವು ಶಿಕ್ಷಣ ಕ್ಷೇತ್ರದಲ್ಲಿ ಸರ್ಕಾರದಿಂದ ಯಾವುದೇ ಸೌಲತ್ತುಗಳನ್ನು ಬೇಕೆದ್ದರು ಒದಗಿಸಲು ಸಿದ್ಧರಿದ್ದು, ಮಕ್ಕಳಲ್ಲಿ ದೇಶ ಅಭಿಮಾನ, ಶಿಸ್ತು, ಮುಂತಾದ ಗುಣಗಳನ್ನು ಬೆಳೆಸುವಲ್ಲಿ ಸ್ಕೌಟ್ ಗೈಡ್ ಕಾರ್ಯ ಶ್ಲಾಘನೀಯ. ತಾವು ಸಹ ವಿದ್ಯಾರ್ಥಿ ದೆಸೆಯಲ್ಲಿ ರಾಷ್ಟ್ರಪತಿ ಸ್ಕೌಟ್ ಆಗಿದ್ದನ್ನು ಸ್ಮರಿಸಿಕೊಂಡರು.

ಮುಖ್ಯ ಅತಿಥಿಗಳಾಗಿ ಸನ್ಮಾನ್ಯ ಕುಮಾರ ನಾಯಕ ಸಂಸದರು ರಾಯಚೂರು, ಸನ್ಮಾನ್ಯ ಜಿ.ಹಂಪಯ್ಯ ಸಾಹುಕಾರ ಶಾಸಕರು ಮಾನ್ವಿ, ಈ ಕಟ್ಟಡದ ಭೂದಾನಿಗಳು ಮಾನ್ಯ ರವಿಬಾಬು ಬಸವರಾಜ ಬೋರೆಡ್ಡಿ ಜಿಲ್ಲಾ ಮುಖ್ಯ ಆಯುಕ್ತರು, ಮಾನ್ಯ ಚಂದ್ರಶೇಖರ ದೊಡ್ಡಮನಿ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಎಮ್. ರಾಮಲಿಂಗಪ್ಪ ಕಾರ್ಯದರ್ಶಿಗಳು, ಮುಜತಬ್ ಖಾದ್ರಿ ಇವರು ಆಗಮಿಸಿದ್ದರು.

ಇದೇ ಸಂದರ್ಭದಲ್ಲಿ ಕೇಮಾನಾಯಕ ಖಜಾಂಚಿಗಳು, ನರಸಿಂಹ ಮೂರ್ತಿ ದೇಸಾಯಿ ಜಂಟಿ ಕಾರ್ಯದರ್ಶಿಗಳು, ಅಂಬಣ್ಣ ನಾಯಕ ಜಿಲ್ಲಾ ಸಂಘಟಕರು, ವಿಶ್ವನಾಥ ಗೌಡ, ಚಂದ್ರಶೇಖರ ನಾಯಕ, ರಜನಿ.ಡಿ , ಪರಿಮಳಾ, ಹಮ್ಜದ್ ಹುಸೇನಿ, ಮಲ್ಕಣ್ಣ, ಗೋಪಿಚಂದ್ ರಾಥೋಡ್, ವೆಂಕಟ ಪೂಜಾರಿ, ಆನಂದ ಹಾಗೂ ಸ್ಕೌಟ್ಸ್ ಮತ್ತು ಗೈಡ್ಸ್ ಮಕ್ಕಳು ಭಾಗವಹಿಸಿದ್ದರು.

**ಮೊದಲನೇ ಪುಟದಿಂದ**

# ಮಾಹಿತಿ ಹಕ್ಕು ಕಾಯ್ದೆ ಜನಪರ, ಪ್ರಬಲ ಕಾಯ್ದೆಯಾಗಿದೆ: ಮಾಹಿತಿ ಆಯೋಗದ ಕಲಬುರಗಿ ಪೀಠದ ಆಯುಕ್ತ ಬಿ. ವೆಂಕಟ್ ಸಿಂಗ್

ಬೆಂಗಳೂರು ಪೀಠದ ರಾಜ್ಯ ಮಾಹಿತಿ ಆಯುಕ್ತ ರಾದ ಡಾ. ಹರೀಶಕುಮಾರ ಅವರು ಮಾತನಾಡಿ, ಮಾಹಿತಿ ಹಕ್ಕು ಕಾಯ್ದೆಯು ಸ್ವತಂತ್ರ ಭಾರತದಲ್ಲಿ ಅತ್ಯಂತ ಕ್ರಾಂತಿಕಾರಕ ಕಾಯ್ದೆಯಾಗಿದೆ. ಸರ್ಕಾರದ ಯೋಜನೆಗಳು, ಸೌಲಭ್ಯಗಳ ಹಿತಾಸಕ್ತಿಗೆ ಸಂಬಂಧಿಸಿದಂತೆ ಮಾಹಿತಿ ಪಡೆಯುವುದು ದೇಶದ ಪ್ರತಿಯೊಬ್ಬ ಪ್ರಜೆಗಳ ಮೂಲಭೂತ ಹಕ್ಕಾಗಿದೆ. ದೇಶದ ಶಾಸಕಾಂಗ, ಕಾರ್ಯಾಂಗ ಮತ್ತು ನ್ಯಾಯಾಂಗ ವ್ಯವಸ್ಥೆ ದಾರಿತಪ್ಪಿದಾಗ ಅಂತಿಮ ನಿರ್ಣಾಯಕರು ಜನರೇ ಆಗಿರುತ್ತಾರೆ. ಜನರಿಗಾಗಿ ತಂದ ಕಾಯ್ದೆ, ಕಾನೂನುಗಳ

ಪಾಲಕರು ಅವರೇ ಆಗಿದ್ದಾರೆ. ಪ್ರಜಾಪ್ರಭುತ್ವ ಪ್ರಬಲವಾಗಬೇಕು. ಜನರಿಗೆ ಸರ್ಕಾರದ ಮಹಿತಿ ಲಭ್ಯವಾಗಬೇಕು ಎಂಬ ಉದ್ದೇಶದಿಂದ ನಮ್ಮ ದೇಶದಲ್ಲಿ 2005ರ ಅಕ್ಟೋಬರ್ 5 ರಂದು ಜಾರಿಗೆ ಬಂದ ಆರ್.ಟಿ.ಐ ಕಾಯ್ದೆಯನ್ನು ಅನುಷ್ಠಾನಗೊಳಿಸಿದ ಮೊಟ್ಟ ಮೊದಲ ರಾಜ್ಯ ನಮ್ಮ ಕರ್ನಾಟಕವಾಗಿದೆ ಎಂದರು.

ಮಾಹಿತಿ ಹಕ್ಕು ಕಾಯ್ದೆಯ ಬಗ್ಗೆ ಅಧಿಕಾರಿಗಳಲ್ಲಿ ಭಯದ ವಾತಾವರಣವಿದ್ದು, ಭಯ ಪಡುವ ಅವಶ್ಯಕತೆ ಇಲ್ಲ. ಈ ಕಾಯ್ದೆಯು ಬಹಳ ಸುಲಭ ಮತ್ತು ಸಂಕೀರ್ಣವಾಗಿದೆ. ಮೊದಲು ಅಧಿಕಾರಿಗಳಲ್ಲಿ ಆರ್.ಟಿ.ಐ ಕುರಿತು ಸ್ಪಷ್ಟ ಅರಿವಿರಬೇಕು. ಇದರ ಬಗ್ಗೆ ಯಾವುದೇ ಅಲಕ್ಷ್ಯ ಬೇಡ. ಸಾರ್ವಜನಿಕ ಮಾಹಿತಿ ಅಧಿಕಾರಿಗಳು ನಿಗದಿತ ಕಾಲವಧಿಯೊಳಗೆ ಸಾರ್ವಜನಿಕರಿಗೆ ಮಾಹಿತಿ ನೀಡಲು ಕ್ರಮ ವಹಿಸಬೇಕು. ಆರ್.ಟಿ.ಐ ಅಡಿ ಸ್ವೀಕೃತವಾಗುವ ಅರ್ಜಿಗಳ ಪೈಕಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಕಂದಾಯ ಮತ್ತು ಲೋಕೋಪಯೋಗಿ ಇಲಾಖೆಗಳ ಅರ್ಜಿಗಳೇ ಹೆಚ್ಚಾಗಿವೆ. ಇದರಲ್ಲಿ ಶೇ.30 ರಷ್ಟು ಅರ್ಜಿಗಳು ಗ್ರಾಮ ಪಂಚಾಯಿತಿಗಳಿಗೆ ಸಂಬಂಧಿಸಿದ ಮಾಹಿತಿ ಒಳಗೊಂಡಿವೆ. ಇತ್ತೀಚಿಗೆ ಪೊಲೀಸ್ ಇಲಾಖೆಯಲ್ಲಿಯೂ ಅರ್ಜಿಗಳು ಸ್ವೀಕೃತವಾಗುತ್ತಿದ್ದು, ಮಾನವ ಹಕ್ಕುಗಳ ಉಲ್ಲಂಘನೆ ಸಂದರ್ಭದಲ್ಲಿ 24 ಗಂಟೆಯೊಳಗೆ ಮಾಹಿತಿ ನೀಡಬೇಕು. ಕಾಯ್ದೆಯನ್ನು ಸಮರ್ಪಕವಾಗಿ ಅನುಷ್ಠಾನ ಮಾಡುವ ಮೂಲಕ ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಮತ್ತಷ್ಟು ಗಟ್ಟಿಗೊಳಿಸಲು ಎಲ್ಲಾ ಅಧಿಕಾರಿಗಳು ಶ್ರಮಿಸಬೇಕು ಎಂದು ಹೇಳಿದರು.

ಕರ್ನಾಟಕ ರಾಜ್ಯ ಮಾಹಿತಿ ಆಯೋಗ ಬೆಂಗಳೂರು ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ಬದ್ರುದ್ದೀನ್ ಕೆ. ಅವರು ಮಾತನಾಡಿ, ಅಧಿಕಾರಿಗಳು ತಮ್ಮ ಸೇವಾವಧಿಯಲ್ಲಿ ಮಾಹಿತಿ ಹಕ್ಕು ಕಾಯ್ದೆಯನ್ನು ಸಮರ್ಪಕವಾಗಿ ನಿರ್ವಹಿಸಿದರೆ ಅದು ನಿವೃತ್ತಿ ನಂತರವೂ ನಿಮ್ಮ ಸಹಾಯಕ್ಕೆ ಬರುತ್ತದೆ. ಅಧಿಕಾರಿಗಳು ಆತ್ಮವಿಶ್ವಾಸದಿಂದಿರಬೇಕು. ಪಾರದರ್ಶಕ ಆಡಳಿತವಿದ್ದಾಗ ಆತ್ಮವಿಶ್ವಾಸ ಸಹಜವಾಗಿಯೇ ಬರುತ್ತದೆ. ಮಾಹಿತಿ ಹಕ್ಕು ಕಾಯ್ದೆಯನ್ನು ಸರಿಯಾಗಿ ಅರ್ಥೈಸಿಕೊಳ್ಳಿ. ಕೊಡಬಹುದಾದ ಹಾಗೂ ಕೊಡಲಾಗದ ಮಾಹಿತಿ ಯಾವುದು ಎಂಬುದನ್ನು ತಿಳಿದುಕೊಳ್ಳಿ. ಅರ್ಜಿ ಬಂದ ಕೂಡಲೇ ಗಾಬರಿಯಾಗುವ ಬದಲು ಅರ್ಜಿಯಲ್ಲಿನ ಮಾಹಿತಿ ನಿಮ್ಮಲ್ಲಿ ಲಭ್ಯವಿದೆಯೋ ಇಲ್ಲವೋ ಎಂಬುದನ್ನು ಪರಿಶೀಲಿಸಿ ಸೂಕ್ತ ಮಾಹಿತಿ ಅಥವಾ ಹಿಂಬರಹವನ್ನು ನೀಡಿ. ಮಾಹಿತಿ ನೀಡಲು 30 ದಿನಗಳ ಅವಧಿಯನ್ನು ನಿಗದಿಪಡಿಸಲಾಗಿದ್ದು, ಕೊನೆಯ ದಿನದವರೆಗೂ ಕಾಯದೆ, ಅರ್ಜಿಗಳನ್ನು ಬೇಗ ವಿಲೇವಾರಿ ಮಾಡಿ. ಇದರಿಂದ ಅನಗತ್ಯ ಒತ್ತಡ ತಪ್ಪುತ್ತದೆ. ಮಾಹಿತಿ ಹಕ್ಕಿಗೆ ಸಂಬಂಧಿಸಿದ ಯಾವುದೇ ಮಾಹಿತಿ ಅಥವಾ ವಿಷಯವನ್ನು ದಾಖಲೆ ಅಥವಾ ಪತ್ರ ಮುಖೇನ ನೀಡಿ. ಎಲ್ಲ ಇಲಾಖೆಗಳ ಸರ್ವಜನಿಕ ಮಾಹಿತಿ ಅಧಿಕಾರಿಗಳು ಇಲಾಖೆಗೆ ಸಂಬಂಧಿಸಿದ ಮಾಹಿತಿಯನ್ನು ಕಾಯ್ದೆಯ 4(1)(ಎ) ಮತ್ತು 4(1)(ಬಿ)ಯಲ್ಲಿ ವಿಂಗಡಿಸಿ, ಇಲಾಖೆಯ ವೆಬ್‌ಸೈಟಗೆ ಅಪ್ಲೋಡ್ ಮಾಡಿ. ಇದರಿಂದ ಶೇ.80 ರಷ್ಟು ಕೆಲಸ ಹಾಗೂ ಒತ್ತಡ ಕಡಿಮೆಯಾಗುತ್ತದೆ. ಮಾಹಿತಿ ಹಕ್ಕಿಗೆ ಸಂಬಂಧಿಸಿದ ಅರ್ಜಿ ಕುರಿತು ಯಾವುದೇ ಅಲಕ್ಷ್ಯ ಅಥವಾ ಅನಗತ್ಯ ವಿಳಂಬ ಮಾಡಬೇಡಿ. ಇಲಾಖೆಗಳ ಮೇಲಧಿಕಾರಿಗಳು ಪ್ರತಿ ಮೂರು ತಿಂಗಳಿಗೊಮ್ಮೆ ಅಧೀನ ಕಚೇರಿಯ ಪರಿಶೀಲನೆ ನಡೆಸಿ, ಯಾವುದೇ ಅರ್ಜಿ ಬಾಕಿ ಇರದಂತೆ ಖಚಿತಪಡಿಸಿಕೊಳ್ಳಿ ಎಂದು ಅವರು ಹೇಳಿದರು.

ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಅವರು ಮಾತನಾಡಿ, ಮಾಹಿತಿ ಹಕ್ಕು ಕಾಯ್ದೆಯಿಂದ ಆಡಳಿತದಲ್ಲಿ ಪಾರದರ್ಶಕತೆ ಬರುವುದರ ಜೊತೆಗೆ ವ್ಯವಸ್ಥೆಯಲ್ಲಿನ ಲೋಪ-ದೋಷಗಳನ್ನು ಸರಿಪಡಿಸಲು ಅನುಕೂಲವಾಗಿದೆ. ಅಧಿಕಾರಿಗಳು ಮಾಹಿತಿ ಹಕ್ಕಿನ ಕುರಿತು ಸರಿಯಾಗಿ ತಿಳಿದುಕೊಳ್ಳಬೇಕು. ತಮಗೆ ಮಾಹಿತಿ ಕೊರತೆ ಇದ್ದರೆ ಈ ಕುರಿತು ಮಾಹಿತಿ ಒಳಗೊಂಡ ಪುಸ್ತಕಗಳನ್ನು ಖರೀದಿಸಿಕೊಂಡು ಓದಿ ತಿಳಿದುಕೊಳ್ಳಬೇಕು. ತಮ್ಮ ಕಛೇರಿಯಲ್ಲಿ ಮಾಹಿತಿ ಹಕ್ಕಿಗೆ ಸಂಬಂಧಿಸಿದ ಯಾವುದೇ ಅರ್ಜಿಗಳು ಬಂದಿದ್ದರೆ ಅವುಗಳನ್ನು ಆದಷ್ಟು ಬೇಗನೆ ವಿಲೇವಾರಿ ಮಾಡಬೇಕು. ಎಲ್ಲಾ ಕಛೇರಿಗಳಲ್ಲಿ ಸಾರ್ವಜನಿಕ ಮಾಹಿತಿ ಅಧಿಕಾರಿ ಮತ್ತು ಪ್ರಥಮ ಮೇಲ್ಮನವಿ ಪ್ರಾಧಿಕಾರಿ ಯಾರು ಎನ್ನುವ ಕುರಿತು ಬೋರ್ಡಗಳನ್ನು ತಮ್ಮ ಕಚೇರಿಗಳಲ್ಲಿ ಕಡ್ಡಾಯವಾಗಿ ಹಾಕಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ಧಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಜಿ.ಪಂ ಉಪಕಾರ್ಯದರ್ಶಿ ಟಿ.ಕೃಷ್ಣಮೂರ್ತಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಕರ್ನಾಟಕ ರಾಜ್ಯ ಮಾಹಿತಿ ಆಯೋಗದ ರಾಜ್ಯ ಮಾಹಿತಿ ಆಯುಕ್ತರು ಸಾರ್ವಜನಿಕ ಮಾಹಿತಿ ಅಧಿಕಾರಿಗಳೊಂದಿಗೆ ಮಾಹಿತಿ ಹಕ್ಕು ಕಾಯ್ದೆಯ ಕುರಿತು ಸಂವಾದ ನಡೆಸಿದರು. ಜಿಲ್ಲಾ ತರಬೇತಿ ಸಂಸ್ಥೆಯ ಪ್ರಾಚಾರ್ಯರಾದ ಕೃಷ್ಣಮೂರ್ತಿ ದೇಸಾಯಿ ಅವರು ಕಾರ್ಯಕ್ರಮ ನಿರೂಪಿಸಿದರು. ಕಾರ್ಯಾಗಾರದಲ್ಲಿ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಭಾಗವಹಿಸಿದ್ದರು.

ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭ

# ಪಿ. ತಿಪ್ಪಣ್ಣ ಬಾಗಲವಾಡರವರ ಶೈಕ್ಷಣಿಕ ಸೇವೆ ಅಪಾರ :ರಾಜಾ ಸುಭಾಷ್ ಚಂದ್ರ ನಾಯಕ ದೊರೆ



ಧೈರ್ಯದ ದಾರಿ

**ಮಾನ್ವಿ,ಫೆ.21–** ನಮ್ಮ ಕಲ್ಯಾಣ ಕರ್ನಾಟಕ ಭಾಗದ ಜನರು ಹಿಂದು ಉಳಿದಿಲ್ಲ ಮನುಷ್ಯರ ಮನಸ್ಥಿತಿಗಳಿಂದ ಹಿಂದುಳಿಯಲು ಕಾರಣ ಎಂದು ರಾಜಾ ಸುಭಾಷ್ ಚಂದ್ರ ನಾಯಕ ದೊರೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಪಟ್ಟಣದ ಸಿದ್ದಾರ್ಥ್ ಪದವಿ ಪೂರ್ವ ಕಾಲೇಜಿನಲ್ಲಿ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಕಾರ್ಯಕ್ರಮದಲ್ಲಿ ಮಾತನಾಡಿ ನಮ್ಮ ರಾಯಚೂರು ಭಾಗ ಸಂಪನ್ಮೂಲಗಳ ಕೊರತೆಯಲ್ಲಿ ಮುಂದಿದೆ. ಏಷ್ಯಾ ಖಂಡದಲ್ಲಿ ಹತ್ತಿ ಖರೀದಿ ಕೇಂದ್ರ ಪ್ರಥಮ ಸ್ಥಾನ, ವಿದ್ಯುತ್ ಶಕ್ತಿ, ಹಟ್ಟಿ ಚಿನ್ನದ ಗಣಿಯಲ್ಲಿ ಬಂಗಾರವನ್ನು ತಯಾರಿಸಲಾಗುತ್ತಿದೆ. ಹಾಗಾಗಿ ಪ್ರತಿಯೊಬ್ಬ ವಿದ್ಯಾರ್ಥಿಗಳು ಉತ್ತಮ ಶಿಕ್ಷಣವನ್ನು ಕಲಿತು ನಿಮ್ಮ ಜೀವನವನ್ನು ರೂಪಿಸಿಕೊಳ್ಳಬೇಕು ಹಾಗೂ ಸಿದ್ದಾರ್ಥ್ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಪಿ ತಿಪ್ಪಣ್ಣ ಬಾಗಲವಾಡರವರು ಗ್ರಾಮೀಣ ಭಾಗದ ಬಡ ವಿದ್ಯಾರ್ಥಿಗಳಿಗೆ ಪಠ್ಯ ಪುಸ್ತಕ, ಸಮವಸ್ತ್ರ,ಭ್ಯಾಗ ಹಾಗೂ ಮಧ್ಯಾಹ್ನದ ಬಿಸಿಯೂಟವನ್ನು ಉಚಿತವಾಗಿ ನೀಡುತ್ತಿರವುದು ಶ್ಲಾಘನೀಯ ಕಾರ್ಯವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದ ಪ್ರಾಸ್ತವಿಕ ನುಡಿಯನ್ನು ಕಾಲೇಜಿನ ಪ್ರಾಚಾರ್ಯರಾದ ಸುನೀತಾ ಶ್ರೀನಿವಾಸ್ ರವರು ನುಡಿದರು. ಮುಖ್ಯ ಅತಿಥಿಗಳಾಗಿ ಪಿ ವೆಂಕಟೇಶ್ ಸಾಹಿತಿಗಳು ಮಾತನಾಡಿ ಪ್ರತಿಯೊಬ್ಬ ವಿದ್ಯಾರ್ಥಿಗಳು ಉತ್ತಮವಾಗಿ ಅಭ್ಯಾಸ ಮಾಡಿ ಒಂದು ಹುದ್ದೆಯನ್ನು ಪಡೆದುಕೊಂಡಾಗ ನಿಮ್ಮ ಬದಕು ಸಾರ್ಥಕವಾಗುತ್ತದೆ. ಹಿರಿಯರ ಸಲಹೆ ಸೂಚನೆಯನ್ನು ಪಡೆದುಕೊಂಡರೆ ನಿಮ್ಮ ಕನಸು ನನಸಾಗುತ್ತದೆ ಎಂದು ಹೇಳಿದರು. ನಂತರ ಇನ್ನೊರ್ವ ಮುಖ್ಯ ಅತಿಥಿಯಾದ ಆಂಜನೇಯ ನಸಲಾಪುರು ಮಾತನಾಡಿ ನಿಮ್ಮ ಹಣೆಬರಹವನ್ನು ನೀವೇ ಬರೆದು ಕೊಳ್ಳಬೇಕೆಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ಒಂದು ವರ್ಷದ ಶ್ರಮವನ್ನು ಕೇವಲ 3 ಗಂಟೆಯಲ್ಲಿ ವಿದ್ಯಾರ್ಥಿಗಳು ಬರೆಯಬೇಕಾಗುತ್ತದೆ. ಮೊಬೈಲ್ ಹಾವಳಿಯ ದುಶ್ಚಟಗಳಿಗೆ ಬಲಿಯಾಗದೆ ಪುಸ್ತಕಗಳಿಂದ ಜ್ಞಾನವನ್ನು ಪಡೆದುಕೊಂಡು ಬುದ್ದಿವಂತರಾಗಿ ಎಂದು ಹೇಳಿದರು. ಸುನೀತಾ ಪ್ರಭು ಯೋಜನಾ ಅಧಿಕಾರಿಗಳು ಧರ್ಮಸ್ಥಳ ಮಾತನಾಡಿ ತಂದೆ ತಾಯಿಗಳು ಮಕ್ಕಳ ಹಿತ ಕಾಪಾಡುವಲ್ಲಿ ತಮ್ಮ ಜೀವನವನ್ನೇ ಮುಡುಪಾಗಿತ್ತಿದ್ದಾರೆ ಎಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷರಾದ ಪಿ ತಿಪ್ಪಣ್ಣ ಬಾಗಲವಾಡ ಮಾತನಾಡಿ ಮೊದಲು ನಾವು ಬದಲಾಗಬೇಕು. ನಾವು ಬದಲಾದರೆ ನಮ್ಮನ್ನು ನೋಡಿ ಬದಲಾಗುತ್ತಾರೆ. ನಾವು ಮಾಡುವ ಕಾರ್ಯದಲ್ಲಿ ಶ್ರಮ ಇರಬೇಕು. ಶ್ರಮದಿಂದ ಇಂದಲ್ಲ ನಾಳೆ ಫಲ ಕೊಟ್ಟೆ ಕೊಡುತ್ತದೆ. ನಮ್ಮ ಕಾಯಕ ಪ್ರಾಮಾಣಿಕತೆಯಿಂದ ಮಾಡಬೇಕು ದುಡ್ಡು ತಾನಾಗಿ ಬರುತ್ತದೆ ಎಂದು ಹೇಳಿದರು. ವಿದ್ಯಾರ್ಥಿಗಳು ಅನಿಸಿಕೆ ವ್ಯಕ್ತಪಡಿಸಿದರು.ಈ ಕಾರ್ಯಕ್ರಮದಲ್ಲಿ ಅಶೋಕ್ ತಡಕಲ್ ಅಧ್ಯಕ್ಷರು ಖಾನಿಪಸಂಘ ಮಾನ್ವಿ, ಸುನೀತಾ ಪ್ರಭು, ಪದವಿ ಮಹಾವಿದ್ಯಾಲಯದ ಪ್ರಾಚಾರ್ಯರಾದ ಶಾಂತಮೂರ್ತಿ, ಉಪನ್ಯಾಸಕರ ವೃಂದ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ನಾಗರತ್ನ ಮತ್ತು ಯಶೋಧ ಸಂಗಡಿಗರಿಂದ ಪ್ರಾರ್ಥನೆ ಗೀತೆ ಹಾಡಿದರು,ಕೃಷ್ಣ ಸ್ವಾಗತಿಸಿದರು ಸಮೀರಾ ನಿರೂಪಿಸಿದರು ಸಂಗೀತಾ ವಂದಿಸಿದರು.

# ಕಡಲೇಕಾಳು ಖರೀದಿ ಪ್ರಕ್ರಿಯೆ ಆರಂಭ: ಬೆಂಬಲ ಬೆಲೆ ಯೋಜನೆಯ ಸದುಪಯೋಗಕ್ಕೆ ಮನವಿ

**ರಾಯಚೂರು ಫೆ,21–** 2025-26ನೇ ಸಾಲಿನ ಹಿಂಗಾರು ಹಂಗಾಮಿನ ಬೆಂಬಲ ಬೆಲೆಯ ಎಫ್.ಎ.ಕ್ಯೂ ಉತ್ತಮ ಗುಣಮಟ್ಟದ ಕಡಲೇಕಾಳು ಖರೀದಿ ಪ್ರಕ್ರಿಯೆಯ ರೈತರ ನೋಂದಣಿಯನ್ನು ದಿನಾಂಕ 20.02.2026 ಶುಕ್ರವಾರದಿಂದ ಪ್ರಾರಂಭ ಮಾಡಲಾಗಿದ್ದು, ರೈತರು ಈ ಬೆಂಬಲ ಬೆಲೆ ಯೋಜನೆಯ ಪ್ರಯೋಜನೆ ಪಡೆದುಕೊಳ್ಳುವಂತೆ ರಾಯಚೂರು ಒಕ್ಕಲುತನ ಹುಟ್ಟುವಳಿ ಮಾರಾಟ ಹಾಗೂ ಸಂಸ್ಕರಣ ಸಹಕಾರ ಸಂಘದ ಅಧ್ಯಕ್ಷರಾದ ಪತಂಗೆ ಜಯವಂತರಾವ್ ಅವರು ರೈತರಲ್ಲಿ ಮನವಿ ಮಾಡಿದ್ದಾರೆ.
ಫ್ರೂಟ್ಸ್ ತಂತ್ರಾಂಶದಲ್ಲಿ ಕಡ್ಡಾಯವಾಗಿ ಬೆಳೆ ಸಮೀಕ್ಷೆ ನೋಂದಣಿಯಾದ ರೈತರಿಂದ ಎಕರೆಗೆ 4 ಕ್ವಿಂಟಲ್‌ನಂತೆ ಗರಿಷ್ಠ 40 ಕ್ವಿಂಟಲ್ ಒಬ್ಬ ರೈತರಿಂದ ಪ್ರತಿ ಕ್ವಿಂಟಲ್ ಕಡಲೇ ಕಾಳು ರೂ.5875 ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ನೋಂದಣಿಗೆ ಬರುವ ರೈತರು ಕಡ್ಡಾಯವಾಗಿ ಆಧಾರ ಕಾರ್ಡ್, ಪಹಣಿ, ಬ್ಯಾಂಕ್ ಪಾಸ್ ಪುಸ್ತಕ ನಕಲು ಪ್ರತಿ, ಒ.ಟಿ.ಪಿ ಗಾಗಿ ಮೊಬೈಲ್ ಮತ್ತು ರೈತರ ಬೆರಳಚ್ಚು ನೀಡುವುದು ಕಡ್ಡಾಯವಾಗಿರುತ್ತದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಚಿವರ ಸಮ್ಮುಖದಲ್ಲಿ ಕಾಂಗ್ರೇಸ್ ಪಕ್ಷವನ್ನು ಸೇರ್ಪಡೆ ಗೊಂಡ ವಿವಿಧ ಪಕ್ಷದ ಮುಖಂಡರು



ಧೈರ್ಯದ ದಾರಿ

**ಮಾನ್ವಿ:ಫೆ.21–** ಪಟ್ಟಣದ ಭಾರತ ಜೋಡೊ ಭವನದಲ್ಲಿ ಬಿಜೆಪಿ ಸೇರಿದಂತೆ ವಿವಿಧ ಪಕ್ಷಗಳಿಂದ ಕಾಂಗ್ರೇಸ್ ಪಕ್ಷಕ್ಕೆ ಆಗಮಿಸಿ ಸೇರ್ಪಡೆ ಗೊಂಡ ಮುಖಂಡರನ್ನು ಪಕ್ಷಕ್ಕೆ ಬರಮಾಡಿಕೊಂಡು ರಾಜ್ಯ ಸಣ್ಣ ನೀರಾವರಿ ಹಾಗೂ ವಿಜ್ಞಾನ ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಮಾತನಾಡಿ ವಿವಿಧ ಕಾರಣಗಳಿಂದ ಕಾಂಗ್ರೇಸ್ ಪಕ್ಷವನ್ನು ಬಿಟ್ಟು ಬೇರೆ ಪಕ್ಷಕ್ಕೆ ಹೋಗಿರುವವರು ಹಾಗೂ ಬೇರೆ ಪಕ್ಷಗಳಿಂದ ಕಾಂಗ್ರೇಸ್ ಪಕ್ಷಕ್ಕೆ ಮರು ಸೇರ್ಪಡೆ ಗೊಂಡಿರುವ ಎಲ್ಲಾರನ್ನು ಪಕ್ಷಕ್ಕೆ ಮುಕ್ತವಾಗಿ ಸ್ವಾಗತಿಸಲಾಗುವುದು ಮುಂದಿನ ಮೂರು ತಿಂಗಳಲ್ಲಿ ಮೊದಲಿಗೆ ಗ್ರಾಮ ಪಂಚಾಯಿತಿ ಚುನಾವಣೆ ನಂತರ ಪುರಸಭೆ,ಜಿಲ್ಲಾ ಪಂಚಾಯಿತಿ,ತಾಲೂಕು ಪಂಚಾಯಿತಿ ಗಳಿಗೆ ಚುನಾವಣೆ ನಡೆಸುವುದಕ್ಕೆ ರಾಜ್ಯ ಸರ್ಕಾರ ತಿರ್ಮಾನ ಮಾಡಿರುವುದರಿಂದ ಸ್ಥಳಿಯ ಚುನವಣೆಯಲ್ಲಿ ಕಾಂಗ್ರೇಸ್ ಪಕ್ಷದ ಕಾರ್ಯಕರ್ತರ ಗೇಲುವಿಗೆ ಹೆಚ್ಚಿನ ಅವಕಾಶ ದೊರೆಯಲಿದೆ ರಾಜ್ಯ ಸರ್ಕಾರವು ರಾಜ್ಯದ ಜನರಿಗೆ ನೀಡಿದ ಎಲ್ಲಾ ಆಶ್ವಾಸನೆಗಳನ್ನು ಕೂಡ ಪೂರ್ಣಪ್ರಮಾಣದಲ್ಲಿ ಈಡೇರಿಸಿರುವುದರಿಂದ ಹಾಗೂ ರಾಜ್ಯದಲ್ಲಿ ಕಾಂಗ್ರೇಸ್ ಪಕ್ಷದಿಂದ ಆಯ್ಕೆಯಾದ 144 ಶಾಸಕರು ತಮ್ಮ ಕ್ಷೇತ್ರಗಳಲ್ಲಿ ಉತ್ತಮವಾದ ಆಭಿವೃದ್ದಿ ಕಾರ್ಯಗಳನ್ನು ಮಾಡಿರುವುದರಿಂದ ಜನರು ಕಾಂಗ್ರೇಸ್ ಪಕ್ಷದ ಪರವಾಗಿದ್ದಾರೆ. ಪ.ಜಾತಿ,ಪ.ಪಂಗಡ,ಒ.ಬಿ.ಸಿ. ಅಲ್ಪಸಂಖ್ಯಾತ ಸಮುದಾಯದವರು ಕೂಡ ಕಾಂಗ್ರೇಸ್ ಪಕ್ಷದ ಪರವಾಗಿರುವುದರಿಂದ ಹಾಗೂ ನಮ್ಮ ಸರ್ಕಾರ ರಾಜ್ಯದಲ್ಲಿ ಕೈಗೊಂಡಿರುವ ಜನಪರ ಕಾರ್ಯಕ್ರಮಗಳಿಂದಾಗಿ ಮುಂದಿನ ಎಲ್ಲಾ ಸ್ಥಳಿಯ ಚುನಾವಣೆಗಳಲ್ಲಿ ಕಾಂಗ್ರೇಸ್ ಪಕ್ಷ ಅತಿಹೆಚ್ಚು ಮತಗಳನ್ನು ಪಡೆಯಲಿದ್ದೆ ಜಿಲ್ಲೆಯಲ್ಲಿ ಕಾಂಗ್ರೇಸ್ ಪಕ್ಷವನ್ನು ಸುಭದ್ರವಾಗಿ ಸಂಘಟಿಸುವುದಕ್ಕೆ ಇಂದಿನಿಂದಲೇ ಎಲ್ಲಾರು ಮುಂದಾಗೋಣ ಪಕ್ಷವನ್ನು ಕಟ್ಟೋಣ ಎಂದು ಕರೆ ನೀಡಿದರು. ರಾಯಚೂರು ಸಂಸದ ಕುಮಾರನಾಯಕ ಮಾತನಾಡಿ ಇಂದಿನ ದಿನಗಳಲ್ಲಿ ಕೇಂದ್ರ ಸರ್ಕಾರದ ನೀತಿಗಳಿಂದಾಗಿ ದೇಶವು ಅತ್ಯಂತ ಸಂದಿಗ್ದ ಪರಿಸ್ಥಿತಿಯನ್ನು ಎದುರಿಸುತ್ತಿದೆ. ಅದ್ದರಿಂದ ದೇಶವನ್ನು ಕಟ್ಟುವ ಕಾರ್ಯಕ್ಕೆ ಪ್ರತಿಯೊಬ್ಬರು ಕೂಡ ಕಾಂಗ್ರೇಸ್ ಪಕ್ಷವನ್ನು ಬೆಂಬಲಿಸುವ ಮೂಲಕ ಬಲಪಡಿಸಬೇಕಾಗಿದೆ ದೇಶದಲ್ಲಿ ಎಲ್ಲಾ ಸಮುದಾಯ ಹಾಗೂ ಎಲ್ಲಾರನೂ ಕೂಡಿಸಿ ಕೊಂಡು ಹೋಗುವ ಏಕೈಕ ಪಕ್ಷ ಕಾಂಗ್ರೇಸ್ ಪಕ್ಷವಾಗಿದ್ದು ಪಕ್ಷಕ್ಕೆ ಸೇರುವ ಪ್ರತಿಯೊಬ್ಬರನ್ನು ಸ್ವಾಗತಿಸಲಾಗುವುದು ಎಂದು ತಿಳಿಸಿದರು.
ಶಾಸಕ ಹಂಪಯ್ಯನಾಯಕ,ಸಮ್ಮುಖದಲ್ಲಿ ಕಾಂಗ್ರೇಸ್ ಪಕ್ಷದ ಧ್ವಜವನ್ನು ಹಿಡಿದು ಅರುಣಚಂದಾ ನೇತೃತ್ವದಲ್ಲಿ ಬೆಂಬಲಿಗರು ಕಾಂಗ್ರೇಸ್ ಪಕ್ಷವನ್ನು ಸೇರ್ಪಡೆ ಗೊಂಡರು.
ಬ್ಲಾಕ್ ಕಾಂಗ್ರೇಸ್ ಅಧ್ಯಕ್ಷರಾದ ಅಬ್ದುಲ್ ಗಾಫೂರ್ ಸಾಬ್, ಗ್ಯಾರಂಟಿ ಸಮಿತಿ ಅಧ್ಯಕ್ಷರಾದ ಬಿ.ಕೆ.ಅಂಬರೇಶಪ್ಪ,ಖಾಲಿದ್‌ಗುರು ಸೇರಿದಂತೆ ಕಾಂಗ್ರೇಸ್ ಪಕ್ಷದ ಮುಖಂಡರು ಇದ್ದರು.

**ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ**
**6360866626**

# ದಿನ್ನಿ, ಗಾರಲದಿನ್ನಿ ಗ್ರಾಮದಲ್ಲಿ ಗ್ರಾಮೀಣ ಶಾಸಕರ ಪ್ರವಾಸ





ಧೈರ್ಯದ ದಾರಿ

**ರಾಯಚೂರು ಫೆ,21–** ಮಹರ್ಷಿ ವಾಲ್ಮೀಕಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶಾಸಕರಾದ ಬಸನಗೌಡ ದದ್ದಲ್ ಅವರು ಫೆ.20ರಂದು ರಾಯಚೂರು ಗ್ರಾಮೀಣ ಕ್ಷೇತ್ರ ವ್ಯಾಪ್ತಿಯ ದಿನ್ನಿ ಹಾಗೂ ಗಾರಲದಿನ್ನಿ ಗ್ರಾಮಗಳಲ್ಲಿ ಪ್ರವಾಸ ಕೈಗೊಂಡರು.
ಇದೆ ವೇಳೆ ಶಾಸಕರು, ಶ್ರೀ ಈಶ್ವರ ದೇವಸ್ಥಾನದ ಗರುಡಸ್ಥಂಭ ಸ್ಥಾಪನೆ ಮತ್ತು ಶ್ರೀ ಲಕ್ಷೀ ವೆಂಕಟೇಶ್ವರ ದೇವಸ್ಥಾನ ಶಿಖರ ಉದ್ಘಾಟನೆ ಹಾಗೂ ಸುಕ್ಷೇತ್ರ ಶಿವಾನಂದಮಠ ಮೌನೇಶ್ವರ ಮಹಾಸ್ವಾಮಿಗಳ ನೇತೃತ್ವದಲ್ಲಿ ನಡೆದ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಭಾಗಿಯಾದರು. ಈ ಸಂದರ್ಭದಲ್ಲಿ ದಿನ್ನಿ ಹಾಗೂ ಗಾರಲದಿನ್ನಿ ಗ್ರಾಮಗಳ ಮುಖಂಡರು, ಗ್ರಾಮಸ್ಥರು ಮತ್ತು ಭಕ್ತಾದಿಗಳು ಉಪಸ್ಥಿತರಿದ್ದರು.

# ಕರೆಗುಡ್ಡ ಗ್ರಾಮದಲ್ಲಿ ನೂತನ ಸಮುದಾಯ ಭವನ ನಿರ್ಮಾಣ ಕಾಮಗಾರಿಗೆ ಸಚಿವರಿಂದ ಚಾಲನೆ

ಧೈರ್ಯದ ದಾರಿ



**ಮಾನ್ವಿ,ಫೆ.21–** ತಾಲೂಕಿನ ಕರೆಗುಡ್ಡ ಗ್ರಾಮದಲ್ಲಿ ಶ್ರೀ ಮಹಾಂ ತೇಶ್ವರ ಮಠದ ಅವರಣದಲ್ಲಿ ನೂತನ ಸಮುದಾಯ ಭವನ ನಿರ್ಮಾಣ ಕಾಮಗಾರಿಗೆ ರಾಜ್ಯ ಸಣ್ಣ ನೀರಾವರಿ ಹಾಗೂ ವಿಜ್ಞಾನ ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿ ಗ್ರಾಮದ ಜನರಿಗೆ ಹಾಗೂ ಗ್ರಾಮದಲ್ಲಿನ ಶ್ರೀ ಮಹಾಂತೇಶ್ವರ ಮಠದ ವಿವಿಧ ಕಾರ್ಯಕ್ರಮ ಗಳಿಗೆ ಅನುಕೂಲವಾಗುವಂತೆ ಶಾಸಕರ,ಸಂಸದರ ,ವಿಧಾನಪರೀಷತ್ ಸದಸ್ಯರ ನೀದಿಯಡಿಯಲ್ಲಿ ಒಟ್ಟು 40 ಲಕ್ಷ ವೆಚ್ಚದಲ್ಲಿ ಸುಸಜ್ಜಿತ ವಾದ ಸಮುದಾಯಭವನವನ್ನು ನಿರ್ಮಾಣ ಕಾಮಗಾರಿಗೆ ಇಂದು ಚಾಲನೆ ನೀಡಲಾಗುತ್ತಿದ್ದು ಅಧಿಕಾರಿಗಳು ಗುಣಮಟ್ಟದ ಕಾಮಗಾರಿಗೆ ಹೆಚ್ಚಿನ ಅದ್ಯತೆಯನ್ನು ನೀಡುವಂತೆ ಸೂಚಿಸಿದರು. ಶ್ರೀ ಮಹಾಂತೇಶ್ವರ ಮಠದ ಶ್ರೀ ಮಹಾಂತಲಿಂಗ ಮಹಾಸ್ವಾಮಿಗಳು .
ರಾಯಚೂರು ಸಂಸದ ಜಿ.ಕುಮಾರ್ ನಾಯಕ್, ಶಾಸಕ ಜಿ ಹಂಪಯ್ಯ ನಾಯಕ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಅಬ್ದುಲ್‌ಗಫೂರ್ ಸಾಬ್, ತಾ. ಗ್ಯಾರಂಟಿ ಸಮಿತಿ ಅಧ್ಯಕ್ಷರಾದ ಬಿ.ಕೆ. ಅಂಬರೇಶಪ್ಪ ವಕೀಲರು ಮುಖಂಡರಾದ ರೌಡೂರು ಮಹಾಂತೇಶ್ ಸ್ವಾಮಿ, , ರಾಜಾಸುಭಾಷ್ ಚಂದ್ರ ನಾಯಕ, ರಾಜಶೇಖರ್ ಪಾಟೀಲ್ ಜಾನೇಕಲ್, ಮಹೇಶ್ ಗೌಡ ಗವಿಗಟ್,ಅಂಬಣ್ಣ ಪಾಟೀಲ್, ಬಸವಲಿಂಗಪ್ಪಗೌಡ, ಚನಬಸವ ನಾಯಕ್,ದೊಡ್ಡಬ ಸಪ್ಪ,ಅಂಬರೀಶ್ ಕುರುಬರ, ಪರ್ವತ ರೆಡ್ಡಿ, ಬ್ಯಾಗವಾಟ್ ವೆಂಕನಗೌಡ, ಬ್ಯಾಗವಾಟ್ ಯಲ್ಲಪ್ಪ,ಬಳ್ಳಾರಿ ಶಿವಕುಮಾರ್ ಮಾನ್ವಿ,ಹನು ಮಂತಪ್ಪ ಗೌಡ ಪೊಲೀಸ್ ಪಾಟೀಲ್ ನಕ್ಕುಂದಿ, ಸೇರಿದಂತೆ ಗ್ರಾಮದ ಮುಖಂಡರು ಭಾಗವಹಿಸಿದರು.

ರಾಯಚೂರು ಗ್ರಾಮೀಣ ಪ್ರದೇಶದಲ್ಲಿ ಸಂಸದರ ಪ್ರವಾಸ, ಅಧಿಕಾರಿಗಳಿಗೆ ಸೂಚನೆ

# ಮಹತ್ವದ ಜಲಧಾರೆ ಕಾಮಗಾರಿ ಕಾಲಮಿತಿಯೊಳಗೆ ಪೂರ್ಣವಾಗಲಿ: ಸಂಸದ ಜಿ.ಕುಮಾರ ನಾಯಕ



ಧೈರ್ಯದ ದಾರಿ

**ರಾಯಚೂರು ಫೆ,21–** ರಾಯಚೂರು–ಯಾದಗಿರಿ ಲೋಕಸಭಾ ಕ್ಷೇತ್ರದ ಸಂಸದರಾದ ಜಿ ಕುಮಾರ ನಾಯಕ ಅವರು ಫೆ.20ರಂದು ರಾಯಚೂರು ಜಿಲ್ಲೆಯ ಗ್ರಾಮೀಣ ಪ್ರದೇಶದಲ್ಲಿ ಪ್ರವಾಸ ಕೈಗೊಂಡು ಲಿಂಗಸುಗೂರ ತಾಲೂಕಿನ ಚಿತ್ತಾಪುರ ಗ್ರಾಮದಲ್ಲಿ ಕೇಂದ್ರ ಸರಕಾರದ ಮಹತ್ವ ಯೋಜನೆ ಜಲಧಾರೆ ಕಾಮಗಾರಿಯ ಪ್ರಗತಿ ಪರಿಶೀಲಿಸಿದರು.

ರಾಯಚೂರು ಜಿಲ್ಲೆಯ 860 ಗ್ರಾಮಗಳು ಹಾಗೂ 2000 ಲಕ್ಷ ಜನ ವಸತಿ ಪ್ರದೇಶಗಳು ಸೇರಿದಂತೆ ಮಾನ್ವಿ, ಮಸ್ಕಿ, ಕವಿತಾಳ, ತುರುವಿಹಾಳ, ಬಳಗಾನೂರ, ಸಿರವಾರ ಹಾಗೂ ಹಟ್ಟಿ ಪಟ್ಟಣಕ್ಕೆ ಡಿಬಿಓಟಿ ಆಧಾರದ ಮೇಲೆ ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆಯನ್ನು ಜಲಜೀವನ್ ಮಿಷನ್ ಯೋಜನೆಯಡಿ ನಬಾರ್ಡ್ ಹಾಗೂ ಯುಡಿಡಿ ಅನುದಾನದ ಒಟ್ಟು 2200 ಕೋಟಿ ರೂ.ಮೊತ್ತದ ಕಾಮಗಾರಿಯನ್ನು ಬೇಗನೆ ಪೂರ್ಣಗೊಳಿಸಬೇಕು ಎಂದು ಇದೆ ವೇಳೆ ಸಂಸದರು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು. ಈ ಕಾಮಗಾರಿಯು 2024ರಲ್ಲಿಯೇ ಪೂರ್ಣವಾಗಬೇಕಿತ್ತು. ಆದರೆ, ಇದುವರೆಗೆ ಯಾಕೆ ಪೂರ್ಣಗೊಂಡಿಲ್ಲ ಎಂದು ಕೇಳಿದ ಸಂಸದರು, ಇದೆ ವೇಳೆ ಅಧಿಕಾರಿಗಳಿಗೆ ತರಾಟೆ ತೆಗೆದುಕೊಂಡರು.

ಈ ಯೋಜನೆಯು ಪೂರ್ಣವಾದಲ್ಲಿ ಪ್ರತಿ ದಿನ 1.60 ಕೋಟಿ ಲೀಟರ್ ನೀರನ್ನು ಸರಬರಾಜು ಮಾಡಲು ಸಾಧ್ಯವಾಗುತ್ತದೆ. ಈ ಯೋಜನೆ ಅನುಷ್ಠಾನಗೊಂಡಲ್ಲಿ ಜಿಲ್ಲೆಯ ಬಹುಭಾಗಗಳಿಗೆ ನೀರಿನ ಸಮಸ್ಯೆ ತಪ್ಪಲಿದೆ. ಇದನ್ನು ಅಧಿಕಾರಿಗಳು ಮತ್ತು ಗುತ್ತಿಗೆದಾರರು ಅರಿಯಬೇಕು. ಈ ಕಾಮಗಾರಿಯನ್ನು ಗುಣಮಟ್ಟದ ಜೊತೆಗೆ ಆದಷ್ಟು ಬೇಗನೆ ಪೂರ್ಣಗೊಳಿಸಬೇಕು ಎಂದು ಸಂಸದರು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಈ ವೇಳೆ ಜಲಧಾರೆ ಯೋಜನೆಯ ಯೋಜನಾ ವ್ಯವಸ್ಥಾಪಕರು ಹಾಗೂ ಗ್ರಾಮೀಣ ನೀರು ಸರಬರಾಜು ಇಲಾಖೆ ಅಧಿಕಾರಿಗಳು, ಸಾರ್ವಜನಿಕರು ಹಾಗೂ ಪಕ್ಷದ ಮುಖಂಡರು ಉಪಸ್ಥಿತರಿದ್ದರು.

# ಮೊದಲಿಗಿಂತಲೂ ಈಗ ರಾಜ್ಯದಲ್ಲಿ ಭ್ರಷ್ಟಾಚಾರ, ವರ್ಗಾವಣೆ ದಂಧೆ ಹೆಚ್ಚಾಗಿದೆ : ಖುದ್ದು ಒಪ್ಪಿಕೊಂಡ ಸಿಎಂ

**ಬೆಂಗಳೂರು, ಫೆ.21–** ಮೊದಲಿಗಿಂತಲೂ ಇತ್ತಿಚೆಗೆ ಭ್ರಷ್ಟಾಚಾರ ಹೆಚ್ಚಾಗಿದೆ. ವರ್ಗಾವಣೆ ಮಾಡಿಸಲು ಏಜೆಂಟರು ಶುರುವಾಗಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಫೋಟಕ ಹೇಳಿಕೆ ನೀಡಿದ್ದಾರೆ.



ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವಿವಿಧ ಹುದ್ದೆಗಳಿಗೆ ನೇಮಕಾತಿ ಹೊಂದಿದವರಿಗೆ ನೇಮಕಾತಿ ಆದೇಶ ನೀಡುವ ಅಭಯ ಹಸ್ತ ಕಾರ್ಯಕ್ರಮವನ್ನು ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಆಯೋಜಿಸಲಾಗಿತ್ತು. ಅಲ್ಲಿ ಮಾತನಾಡಿದ ಮುಖ್ಯಮಂತ್ರಿಯವರು ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಲು ತಮ ಸರ್ಕಾರ ನೇಮಕಾತಿ ಮತ್ತು ವರ್ಗಾವಣೆಗೆ ಕೌನ್ಸಿಲಿಂಗ್ ಪದ್ಧತಿಯನ್ನು ಅಳವಡಿಸಿದೆ ಎಂದು ಹೇಳಿದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ವೈದ್ಯರು ಸೇರಿದಂತೆ 5700 ಹುದ್ದೆಗಳಿಗೆ ಕೌನ್ಸಲಿಂಗ್ ಮೂಲಕ ವರ್ಗಾವಣೆ ಮಾಡಲಾಗಿದೆ. ನೇಮಕಾತಿ ಮತ್ತು ವರ್ಗಾವಣೆಯಲ್ಲಿ ಭ್ರಷ್ಟಾಚಾರ ನಡೆಯಬಾರದು. ಯಾರು ಕೂಡ ಶಿಫಾರಸು ಮಾಡಿಸಲು ಬೇರೆಯವರ ಬಳಿ ಹೋಗಬೇಡಿ ಎಂದು ಸಲಹೆ ನೀಡಿದರು.

ನಮಲ್ಲಿ ವರ್ಗಾವಣೆಗೆ ಏಜೆಂಟ್‌ಗಳು ಶುರುವಾಗಿದ್ದಾರೆ. ಯಾರಿಗೆ ಯಾರು ಹತ್ತಿರ ಇದ್ದಾರೆ ಎಂಬುವವರನ್ನೆ? ಹುಡುಕುತ್ತಾರೆ. ಅವರ ಮೂಲಕ ವರ್ಗಾವಣೆ ಮಾಡಿಸಲು ಯತ್ನಿಸುತ್ತಾರೆ. ಇಂತಹ ಸಂದರ್ಭದಲ್ಲಿ ವರ್ಗಾವಣೆ ಮಾಡಿಸಿಕೊಳ್ಳಬೇಕಾದವರು ಏಜೆಂಟರಿಗೆ ಮತ್ತು ಪ್ರಭಾವಿಗಳಿಗೆ ಹಣ ನೀಡುವ ಪರಿಸ್ಥಿತಿ ಬರುತ್ತದೆ. ನಾನು 40 ವರ್ಷ ಶಾಸಕನಾಗಿ, ಸಚಿವನಾಗಿ ಮತ್ತು ಮುಖ್ಯಮಂತ್ರಿಯಾಗಿ ಕೆಲಸ ಮಾಡಿದ್ದೇನೆ. ಈ ಮೊದಲೆಲ್ಲಾ ಅಷ್ಟೊಂದು ಭ್ರಷ್ಟಾಚಾರ ಇರಲಿಲ್ಲ. ಈಗ ಹೆಚ್ಚಾಗುತ್ತಿದೆ ಎಂದು ಹೇಳಿದರು.

ವೈದ್ಯಕೀಯ ಸೇವೆಯಲ್ಲಿರುವವರು ಮಾನವೀಯತೆಯಿಂದ ನಡೆದುಕೊಳ್ಳಬೇಕು. ರೋಗಿಗಳನ್ನು ಕರುಣೆಯಿಂದ ನೋಡಬೇಕು. ಆಸ್ಪತ್ರೆಗಳಲ್ಲಿ ಒಳ್ಳೆಯ ಚಿಕಿತ್ಸೆ ಸಿಕ್ಕರೆ ಸರ್ಕಾರಕ್ಕೆ ಮತ್ತು ವೈದ್ಯರಿಗೆ ಒಳ್ಳೆಯ ಹೆಸರು ಬರಲಿದೆ. ಆರೋಗ್ಯ ಇಲಾಖೆಯ ನೇಮಕಾತಿಯನ್ನು ಒಂದು ವೃತ್ತಿಯನ್ನಾಗಿ ಮಾತ್ರ ನೋಡಬೇಡಿ. ಇದು ಮಹತ್ವದ ಜವಾಬ್ದಾರಿ. ಜನರ ಜೀವ ಉಳಿಸುವ ಕೆಲಸ ಎಂಬುದನ್ನು ನೆನಪಿನಲ್ಲಿ ಇರಿಸಿಕೊಳ್ಳಿ ಎಂದರು.

ತಮ ಸರ್ಕಾರ ಅಧಿಕಾರಕ್ಕೆ ಬರುವಾಗ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಹಂತ ಹಂತವಾಗಿ ಭರ್ತಿ ಮಾಡುತ್ತೇವೆ ಎಂದು ಭರವಸೆ ನೀಡಲಾಗಿತ್ತು. ಅದನ್ನು ಈಡೇರಿಸುತಿದ್ದೇವೆ. ಅಧಿಕಾರಿಗಳು ಸರ್ಕಾರ ಮತ್ತು ಸಮಾಜದ ನಡುವೆ ಸೇತುವೆಯಂತೆ ಕೆಲಸ ಮಾಡುತ್ತಾರೆ. ಶಿಕ್ಷಣ, ಆರೋಗ್ಯ ಮತ್ತು ಪೊಲೀಸ್ ಇಲಾಖೆಗಳು ಅಗತ್ಯ ಸೇವೆಗಳಾಗಿವೆ. ಇದರಲ್ಲಿ ಹುದ್ದೆಗಳು ಖಾಲಿ ಇರಬಾರದು. ಅದಕ್ಕಾಗಿ ನೇಮಕಾತಿಯಲ್ಲಿ ಆದ್ಯತೆ ನೀಡಲಾಗಿದೆ ಎಂದರು.

ಒಳ ಮೀಸಲಾತಿಯಿಂದಾಗಿ ನೇಮಕಾತಿ ವಿಳಂಬವಾಗಿದೆ. ಎಲ್ಲಾ ಇಲಾಖೆಗಳಲ್ಲಿ ಎರಡೂವರೆ ಲಕ್ಷ ಹುದ್ದೆಗಳು ಖಾಲಿ ಇವೆ. ಅವುಗಳಿಗೆ ಹಂತ ಹಂತವಾಗಿ ಭರ್ತಿ ಮಾಡಲಾಗುವುದು ಎಂದು ವಿವರಿಸಿದರು.ಆರೋಗ್ಯ ಇಲಾಖೆಗೆ ಸೇರಿದವರಿಗೆ ಮಾನವೀಯತೆ ಬಹಳ ಮುಖ್ಯ. ಜಾತಿ, ಧರ್ಮದ ತಾರತಮ್ಯ ಇರಬಾರದು. ಕಾಯಿಲೆ ಬಂದಾಗ ಯಾವುದೇ ಜಾತಿ ಇರುವುದಿಲ್ಲ. ಗುಣಮುಖರಾದಾಗ ಬಳಿಕ ಮತ್ತೆ ಜಾತಿ ಕೇಳುತ್ತಾರೆ. ಶಸ್ತ್ರ ಚಿಕಿತ್ಸೆಗೆ ಒಳಗಾಗುವಾಗ ಅಗತ್ಯ ಇರುವ ರಕ್ತ ಪಡೆಯಲು ಧರ್ಮ, ಜಾತಿ ನೋಡುವುದಿಲ್ಲ. ಮುಸ್ಲಿಂ, ಕ್ರೈಸ್ತ ಯಾರಾದರೂ ಸರಿ ಅವರಿಂದ ರಕ್ತ ಪಡೆದು ನಮ ದೇಹದ ಒಳಗೆ ಸೇರಿಸಿಕೊಳ್ಳುತ್ತೇವೆ. ಆ ಸಂದರ್ಭದಲ್ಲಿ ಧರ್ಮ ನೋಡುವುದಿಲ್ಲ. ಗುಣಮುಖರಾಗುತ್ತಿದ್ದಂತೆ ಮತ್ತೆ ಯಾವ ಜಾತಿ ಎಂದು ಕೇಳಲಾರಂಭಿಸುತ್ತಾರೆ ಎಂದರು.

ಜಾತಿ ಧರ್ಮ ವೈಯಕ್ತಿಕವಾದದ್ದು. ಅದನ್ನು ಮನೆಯಲ್ಲೇ ಬಿಟ್ಟು ಬನ್ನಿ ಎಂದು ಸಲಹೆ ನೀಡಿದ ಅವರು, ಚಿಕಿತ್ಸೆಗಿಂತಲೂ ಮುಂಜಾಗ್ರತೆ ಬಹಳ ಮುಖ್ಯ. ಆರೋಗ್ಯ ಇಲಾಖೆಗೆ ಸೇರ್ಪಡೆಯಾಗಿರುವ ಇತರ ಹುದ್ದೆಯವರು ವೈದ್ಯರಷ್ಟೆ ಮುಖ್ಯರಾಗಿರುತ್ತಾರೆ ಎಂದು ಹೇಳಿದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ರಾವೂರ: ಎರಡು ಕೋಮಿನ ನಡುವೆ ಗಲಾಟೆ

**ಕಲಬುರಗಿ,ಫೆ.21–**ಛತ್ರಪತಿ ಶಿವಾಜಿ ಮಹಾರಾಜ ಜಯಂತಿ ಮೆರವಣಿಗೆ ಸಂದರ್ಭದಲ್ಲಿ ಕಲಬುರಗಿಯಲ್ಲಿ ಎರಡು ಕೋಮಿನ ಜನರ ನಡುವೆ ಗಲಾಟೆ ನಡೆದಿದೆ. ಚಿತ್ತಾಪೂರ ತಾಲೂಕಿನ ರಾವೂರ ಗ್ರಾಮದಲ್ಲಿ ಈ ಘಟನೆ ನಡೆದಿದ್ದು, ನಿನ್ನೆ ಸಂಜೆ ಛತ್ರಪತಿ ಶಿವಾಜಿ ಜಯಂತಿ ಹಿನ್ನೆಲೆ ಯುವಕರಿಂದ ಶಿವಾಜಿ ಭಾವಚಿತ್ರ ಮೆರವಣಿಗೆ ಮಾಡಲಾಗಿತ್ತು.

ಈ ವೇಳೆ ನಡೆದ ಗಲಾಟೆಯಲ್ಲಿ ಮೂರು ನಾಲ್ಕು ಜನರಿಗೆ ಗಂಭೀರ ಗಾಯವಾಗಿದ್ದು, ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ವಾಡಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.



# ಅನ್ಯಾಯದ ವಿರುದ್ಧ ಧ್ವನಿ ಎತ್ತಲು ಸಾರ್ವಜನಿಕರು ಹಿಂಜರಿಯಬಾರದು: ಗೌ,ನ್ಯಾ,ಸಾಗರ ಗುರುಗೌಡ ಪಾಟೀಲ್

**ಸೇಡಂ , ಫೆ ,21:** ಜಿಲ್ಲಾ ಮತ್ತು ತಾಲೂಕಾ ಕಾನೂನು ಸೇವೆಗಳ ಪ್ರಾಧಿಕಾರದ ಮೂಲಕ ಲಭ್ಯವಿರುವ ಉಚಿತ ಕಾನೂನು ಸಲಹೆಗಳನ್ನು ಸಾರ್ವಜನಿಕರು ಪಡೆದುಕೊಂಡು ತಮಗಾಗುವ ಅನ್ಯಾಯದ ವಿರುದ್ಧ ಧ್ವನಿ ಎತ್ತಲು ಹಿಂಜರಿಯಬಾರದು ಹಾಗೂ ತಮ್ಮ ಹಕ್ಕುಗಳನ್ನು ರಕ್ಷಿಸಿಕೊಳ್ಳಬೇಕು ಎಂದು ಗೌರವಾನ್ವಿತ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಅಧ್ಯಕ್ಷರು ತಾಲೂಕ ಕಾನೂನು ಸೇವಾ ಸಮಿತಿ ಸೇಡಂನ ಸಾಗರ ಗುರುಗೌಡ ಪಾಟೀಲ್ ಎಂದು ಹೇಳಿದರು.



ಇಲ್ಲಿನ ತಾಲೂಕಾ ಕ್ರೀಡಾಂಗಣದಲ್ಲಿ ತಾಲೂಕಾ ಕಾನೂನು ಸೇವಾ ಸಮಿತಿ, ನ್ಯಾಯವಾದಿಗಳ ಸಂಘ,ಪೊಲಿಸ ಇಲಾಖೆ,ಇವರುಗಳ ಸಂಯುಕ್ತ ಆಶ್ರಯದಲ್ಲಿ ಕಾನೂನು ಅರಿವು ನೆರವು ಕಾರ್ಯಕ್ರಮದಲ್ಲಿ ವಿಶ್ವ ಸಾಮಾಜಿಕ ನ್ಯಾಯ ದಿನಾಚಾರಣೆ ಪ್ರಯುಕ್ತ ಕಾರ್ಯಕ್ರಮ ಉದ್ಘಾಟಿಸಿ ಆಟೋ ಚಾಲಕರ ಹಾಗೂ ಸಾರ್ವಜನಿಕರ ಉದ್ದೇಶಿಸಿ ಮಾತನಾಡಿದರು. ಸಿವಿಲ್ ನ್ಯಾಯಾಧೀಶರಾದ ಶ್ರೀ ಬಾಲು, ಸಿಪಿಐ ಮಾಹದೇವ ದಿಡ್ಡಿಮನಿ ಮಾತನಾಡಿದರು, ವಿಶ್ವ ಸಾಮಾಜಿಕ ನ್ಯಾಯ ದಿನಾಚರಣೆ ಅಂಗವಾಗಿ ಕಿರಿಯ ವಕೀಲರಾದ ಶಂಕರರಾವ್ ಉಪನ್ಯಾಸ ನೀಡಿದರು. ಈ ವೇಳೆಯಲ್ಲಿ ಶಾಂತಕುಮಾರ್ ಹಿರೇಮಠ್, ಶಂಕರ್ ರಮಾನಂದ ಅವಂಟಿ, ಜಗದೇವಪ್ಪ ಭೀಮನಹಳ್ಳಿ, ಪರಶುರಾಮ್ ಮದುಕಲ, ಶ್ರೀಶೈಲ್ ಬಿರಾದರ್ ಸೇರಿದಂತೆ ತಾಲೂಕಿನ ಆಟೋ ಚಾಲಕರು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.ಸ್ವಾಗತ ನಿರೂಪಣೆ ವಕೀಲರಾದ ನಾಗೇಶ್ ಮಿಟಿ ಮಾಡಿದರು.

"ಡಾಕ್ಟರ್ ಮಕ್ಕಳು ಡಾಕ್ಟರ್ ಆಗಬಹುದು ವಕೀಲರ ಮಕ್ಕಳು ವಕೀಲರಾಗಬಹುದು ಪೊಲೀಸರ ಮಕ್ಕಳು ಪೊಲೀಸರಾಗಬಹುದು, ಅವರಂತೆ ಬಡವರ ಮಕ್ಕಳು ಬಡವರಾಗಿ ಇರದೆ,ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ ಅವರು ಉನ್ನತ ಹುದ್ದೆಯನ್ನು ಪಡಿಯುವಂತ ಪ್ರಯತ್ನ ಬಡವರು ಮಾಡಲಿ" ಆದಷ್ಟು ಬೇಗ ಸೇಡಂ ತಾಲೂಕಿನ ಬಸ್ ಸ್ಟ್ಯಾಂಡ್ ಹಾಗೂ ಪಟ್ಟಣದ ಒಳಗಡೆ ಪಾಕಿರ್ಂಗ್ ವ್ಯವಸ್ಥೆ ಬಹುಬೇಗ ಮಾಡಲಾಗುತ್ತಿದೆ.

ಗೌ,ನ್ಯಾ,ಸಾಗರ ಗುರುಗೌಡ ಪಾಟೀಲ್
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಅಧ್ಯಕ್ಷರು ತಾಲೂಕ ಕಾನೂನು ಸೇವಾ ಸಮಿತಿ ಸೇಡಂ

# ಪ್ರಸ್ತುತ ಸಮಾಜದಲ್ಲಿ ಸಮಾನತೆಗಾಗಿ ಎಲ್ಲರೂ ಕೈಜೋಡಿಸಬೇಕು : ಅರುಣಕುಮಾರ ಪಾಟೀಲ



**ಅಫಜಲಪುರ ;ಫೆ.21:** ಅಸ್ಪೃಶ್ಯತೆ ಎಂಬುದು ನಮ್ಮ ಸಮಾಜದ ಮೇಲೆ ಕಲೆ ಬೀರಿರುವ ದುಷ್ಟ ಥೆಯಾಗಿದ್ದು, ಇದನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡುವುದು ಪ್ರತಿಯೊಬ್ಬರ ಹೊಣೆಗಾರಿಕೆ ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷರಾದ ಅರುಣಕುಮಾರ ಎಂ.ವೈ. ಪಾಟೀಲ ಹೇಳಿದರು.

ಪಟ್ಟಣದ ತಹಸೀಲ್ದಾರ್ ಕಚೇರಿ ಎದುರುಗಡೆ ಇರುವ ಸರಕಾರಿ ಪ್ರೌಢಶಾಲೆ ಆವರಣದ ಗುರುಭವನದಲ್ಲಿ
ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ, ಕಲಬುರಗಿ ಹಾಗೂ ಸಾಮ್ರಾಟ್ ಅಶೋಕ ಚಾರಿಟೇಬಲ್ ಟ್ರಸ್ಟ್ ಮಲ್ಲಾಬಾದ ಇವರ ಸಂಯುಕ್ತ ಆಶ್ರಯದಲ್ಲಿ 2025–26ನೇ ಸಾಲಿನ ಅಸ್ಪೃಶ್ಯತಾ ನಿರ್ಮೂಲನಾ ವಿಚಾರಗೋಷ್ಠಿ, ಕಾರ್ಯಗಾರ ಹಾಗೂ ಅರಿವು ಮೂಡಿಸುವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಡಾ. ಬಿ.ಆರ್. ಅಂಬೇಡ್ಕರ್ ಅವರು ನೀಡಿದ ಸಂವಿಧಾನವು ಸಮಾನತೆ, ನ್ಯಾಯ ಮತ್ತು ಸ್ವಾತಂತ್ರ್ಯದ ಮೌಲ್ಯಗಳನ್ನು ಸಾರುತ್ತದೆ. ಆದ್ದರಿಂದ ಸಂವಿಧಾನದ ಆಶಯಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ನಿಜವಾದ ಸಾಮಾಜಿಕ ನ್ಯಾಯ ಸಾಧ್ಯವೆಂದು ಪಾಟೀಲ ಅಭಿಪ್ರಾಯ ಪಟ್ಟರು.

ಶಾಲಾ ಹಂತದಿಂದಲೇ ಮಕ್ಕಳಲ್ಲಿ ಮಾನವೀಯ ಮೌಲ್ಯಗಳು, ಸಮಾನತೆ ಹಾಗೂ ಬಾಂಧವ್ಯದ ಅರಿವು ಬೆಳೆಸಬೇಕು. ಜಾತಿ–ಮತ ಬೇಧವಿಲ್ಲದೆ ಎಲ್ಲರೂ ಸಹೋದರರಂತೆ ಬದುಕಿದಾಗ ಮಾತ್ರ ಸಮಾಜದಲ್ಲಿ ಶಾಂತಿ ಮತ್ತು ಪ್ರಗತಿ ಸಾಧಿಸಬಹುದು ಎಂದು ಹೇಳಿದರು. ಯುವ ಪೀಳಿಗೆ ದೇಶದ ಭವಿಷ್ಯವಾಗಿರುವುದರಿಂದ ಅವರು ಅಸ್ಪೃಶ್ಯತೆ ವಿರುದ್ಧ ಧ್ವನಿಯಾಗಬೇಕು ಎಂದು ಕರೆ ನೀಡಿದರು.

ಸಂವಿಧಾನದ ಪ್ರಸ್ತಾವನೆಯನ್ನು ಚಂದು ಕರಜಗಿ ಬಿಡುಗಡೆ ಮಾಡಿದರು. ತಾ.ಸ.ಕ.ಇ. ಸಹಾಯಕ ನಿರ್ದೇಶಕರಾದ ಅಶೋಕ ನಾಯಕ ಹಾಗೂ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದ ಟ್ರಸ್ಟ್ ಅಧ್ಯಕ್ಷರಾದ ಯಲ್ಲಪ್ಪ ದೊಡ್ಮನಿ ಮಾತನಾಡಿ, ಸಮಾಜದಲ್ಲಿ ಸಮಾನತೆ, ಬಾಂಧವ್ಯ ಹಾಗೂ ಅಸ್ಪೃಶ್ಯತಾ ನಿರ್ಮೂಲನೆಗಾಗಿ ನಿರಂತರ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ ಎಂದು ತಿಳಿಸಿದರು.ಯುವ ಮುಖಂಡ ಸೂರ್ಯಕಾಂತ್ ಮ್ಯಾಕೇರಿ ಹಾಗೂ ಕಸಾಪ ಅಧ್ಯಕ್ಷೆ ಪ್ರಭಾವತಿ ಮೇತ್ರೆ ಪೊಟೋ ಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಲಚ್ಚಪ್ಪ ಜಮಾದಾರ, ಬೀರಣ್ಣ ಕನಕ ಟೇಲರ, ಮಹಾಂತೇಶ್ ಬಡದಾಳ, ಭೀಮರಾಯ ಗೌರ, ಮಹಾನಿಂಗ್ ಅಂಗಡಿ, ರಾಜು ಆರೇಕರ್, ರವಿ ಗೌರ, ಗುರುದೇವ ಪೂಜಾರಿ ವಕೀಲರು, ಲಕ್ಷ್ಮಿ ಪುತ್ರ ಜಮಾದಾರ್, ರಾಜಲಕ್ಷ್ಮಿ ಫೌಂಡೇಶನ್ ಟ್ರಸ್ಟ್ ಅಧ್ಯಕ್ಷೆ ಸರಸ್ವತಿ (ಮೇಘಾ) ದೊಡ್ಡಮನಿ, ಅರುಣ್ ಕುಮಾರ್ ಇನಾಮದಾರ್ ಕಲಬುರಗಿ, ಪಾಂಡುರಂಗ ಬಿಲ್ಕ್ ರ್ ನೀಲೂರ್,ಶಶಿಕುಮಾರ್ ಶಿಹಬಾದ್, ಜಟ್ಟೆಪ್ಪ ಪೂಜಾರಿ ನೀರುಪಿಸಿದರು, ಪ್ರಕಾಶ್ ಚೆಲ್ಲುನಗಿ ಸ್ವಾಗತಿಸಿದರು, ದತ್ತಾತ್ರೇ ಬಂಕಲಗಿ ವಂದಿಸಿದರು.

# ರಾಜ್ಯಾದ್ಯಂತ ಸಾವಿರಾರು ಸರ್ಕಾರಿ ಶಾಲೆ ಮುಚ್ಚಲು ಅಥವಾ ವಿಲೀನಕ್ಕೆ ಮುಂದಾಗಿರುವ ಜನವಿರೋಧಿ ಧೋರಣೆ ಖಂಡನೀಯ : ಆನಂದ ದೊಡ್ಡಮನಿ



**ಕಲಬುರಗಿ:ಫೆ.21:** ರಾಜ್ಯ ಸರ್ಕಾರವು 'ಕಡಿಮೆ ದಾಖಲಾತಿ' ನೆಪವೊಡ್ಡಿ ರಾಜ್ಯಾದ್ಯಂತ ಸಾವಿರಾರು ಸರ್ಕಾರಿ ಶಾಲೆಗಳನ್ನು ಮುಚ್ಚಲು ಅಥವಾ ವಿಲೀನಗೊಳಿಸಲು ಮುಂದಾಗಿರುವ ಜನವಿರೋಧಿ ಧೋರಣೆಯನ್ನು ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾ ಅಧ್ಯಕ್ಷ ಆನಂದ ಎಸ್. ದೊಡ್ಡಮನಿ ಖಂಡಿಸಿದ್ದಾರೆ.

ಸರ್ಕಾರವು ಬಡ ಮಕ್ಕಳ ಶಿಕ್ಷಣದ ಹಕ್ಕನ್ನು ಕಸಿದುಕೊಳ್ಳುತ್ತಿದೆ. ಶಾಲೆಗಳನ್ನು ಮುಚ್ಚುವ ಬದಲು ಅಲ್ಲಿ ಮೂಲಸೌಕರ್ಯ ಮತ್ತು ಶಿಕ್ಷಕರನ್ನು ಒದಗಿಸಿ ಅಭಿವೃದ್ಧಿಪಡಿಸಬೇಕು," ಎಂದು ಆಗ್ರಹಿಸುತ್ತಾ ಒಂದು ವೇಳೆ ಸರ್ಕಾರ ತನ್ನ ನಿರ್ಧಾರವನ್ನು ಹಿಂಪಡೆಯದಿದ್ದರೆ ಮುಂದಿನ ದಿನಗಳಲ್ಲಿ ರಾಜ್ಯಾದ್ಯಂತ ಹೋರಾಟವನ್ನು ತೀವ್ರಗೊಳಿಸುವುದಾಗಿ ಎಚ್ಚರಿಸಲಾಯಿತು.

ನಮ್ಮ ನಾಡಿನ ಶೈಕ್ಷಣಿಕ ಅಡಿಪಾಯವಾಗಿರುವ ಸರ್ಕಾರಿ ಶಾಲೆಗಳು ಕೇವಲ ಕಟ್ಟಡಗಳಲ್ಲ, ಅವು ಸಮಾನತೆ ಮತ್ತು ಜ್ಞಾನದ ದೇಗುಲಗಳು. ಲಕ್ಷಾಂತರ ಪ್ರತಿಭೆಗಳನ್ನು ದೇಶಕ್ಕೆ ನೀಡಿದ ಕೀರ್ತಿ ನಮ್ಮ ಸರ್ಕಾರಿ ಶಾಲೆಗಳಿಗಿದೆ. ಆದರೆ, ಇಂದಿನ ಬದಲಾದ ಸನ್ನಿವೇಶದಲ್ಲಿ ಈ ಶಾಲೆಗಳ ಉಳಿವಿಗಾಗಿ ನಾವೆಲ್ಲರೂ ಕೈಜೋಡಿಸಬೇಕಾದ ಅನಿವಾರ್ಯತೆ ಎದುರಾಗಿದೆ.

ಸರ್ಕಾರಿ ಶಾಲೆಗಳನ್ನು ಉಳಿಸಲು ಮತ್ತು ಬಲಪಡಿಸಲು ಈ ಕೆಳಗಿನ ಅಂಶಗಳತ್ತ ಗಮನ ಹರಿಸುವುದು ಇಂದಿನ ಅಗತ್ಯವಾಗಿದೆ. ಪ್ರಮುಖ ಅಂಶಗಳಾದ ಗುಣಮಟ್ಟದ ಶಿಕ್ಷಣ: ಸರ್ಕಾರಿ ಶಾಲೆಗಳಲ್ಲಿ ಅನುಭವವಿರುವ ಮತ್ತು ನುರಿತ ಶಿಕ್ಷಕರಿದ್ದಾರೆ. ಮಕ್ಕಳ ಸರ್ವಾಂಗೀಣ ಬೆಳವಣಿಗೆಗೆ ಪೂರಕವಾದ ಪಠ್ಯಕ್ರಮ ಮತ್ತು ಕಲಿಕಾ ಪರಿಸರವನ್ನು ಉತ್ತೇಜಿಸುವುದು ನಮ್ಮ ಗುರಿಯಾಗಬೇಕು.

**ಮೂಲಸೌಕರ್ಯ ಅಭಿವೃದ್ಧಿ:** ಸ್ಮಾರ್ಟ್ ಕ್ಲಾಸ್ ರೂಂಗಳು, ಸುಸಜ್ಜಿತ ಗ್ರಂಹಾಂತು, ಆಟದ ಮೈದಾನ" ಮತ್ತು ಶೌಚಾಲಯಗಳಂತಹ ಮೂಲಭೂತ ಸೌಕರ್ಯಗಳನ್ನು ಸರ್ಕಾರ ಮತ್ತು ದಾನಿಗಳ ನೆರವಿನಿಂದ ಮೇಲ್ದರ್ಜೆಗೇರಿಸಬೇಕಿದೆ.

**ನಮ್ಮ ಶಾಲೆ ನಮ್ಮ ಹೆಮ್ಮೆ:** ಪ್ರತಿಯೊಬ್ಬ ಪೊಷಕರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸುವ ಮೂಲಕ ಈ ವ್ಯವಸ್ಥೆಯ ಮೇಲೆ ನಂಬಿಕೆ ಇಡಬೇಕು. ಸ್ಥಳೀಯ ಸಮುದಾಯವು ಶಾಲೆಯ ಅಭಿವೃದ್ಧಿಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು.

**ಕನ್ನಡ ಮಾಧ್ಯಮಕ್ಕೆ ಒತ್ತು:** ಮಾತೃಭಾಷೆಯಲ್ಲಿನ ಶಿಕ್ಷಣ ಮಗುವಿನ ಗ್ರಹಿಕೆಯ ಶಕ್ತಿಯನ್ನು ಹೆಚ್ಚಿಸುತ್ತದೆ. ಸರ್ಕಾರಿ ಶಾಲೆಗಳ ಮೂಲಕ ಕನ್ನಡ ಭಾಷೆ ಮತ್ತು ಸಂಸ್ಕೃತಿಯನ್ನು ಉಳಿಸುವುದು ನಮ್ಮೆಲ್ಲರ ಕರ್ತವ್ಯ. ಸರ್ಕಾರಿ ಶಾಲೆಗಳು ಕೇವಲ ಬಡವರಿಗಾಗಿ ಅಲ್ಲ, ಅವು ಸಮಾಜದ ಪ್ರತಿಯೊಂದು ಮಗುವಿಗೂ ಉಚಿತ ಮತ್ತು ಗುಣಮಟ್ಟದ ಶಿಕ್ಷಣ ನೀಡುವ ಹಕ್ಕುಗಳಾಗಿವೆ. ಹಳೆಯ ವಿದ್ಯಾರ್ಥಿಗಳು, ಉದ್ಯಮಿಗಳು ಮತ್ತು ಸಂಘ–ಸಂಸ್ಥೆಗಳು ತಮ್ಮ ಗ್ರಾಮದ ಶಾಲೆಗಳನ್ನು ದತ್ತು ತೆಗೆದುಕೊಳ್ಳುವ ಮೂಲಕ ಅಥವಾ ಅಗತ್ಯ ಸೌಲಭ್ಯ ಒದಗಿಸುವ ಮೂಲಕ ಬೆಂಬಲಿಸಬೇಕೆಂದು. ಬನ್ನಿ, ನಮ್ಮ ಸರ್ಕಾರಿ ಶಾಲೆಗಳನ್ನು ಉಳಿಸೋಣ. ಬಲಿಷ್ಠ ಭಾರತವನ್ನು ಕಟ್ಟೋಣ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶೇ. 10 ಸುಂಕ ಜಾರಿಗೆ ಮುದ್ರೆ

**ವಾಷಿಂಗ್ಟನ್, ಫೆ. 21–** ಜಾಗತಿಕ ಮಟ್ಟದಲ್ಲಿ ಎಲ್ಲಾ ದೇಶಗಳಿಂದ ಆಗಮಿಸುವ ಆಮದು ವಸ್ತುಗಳ ಮೇಲೆ 10 ಶೇಕಡಾ ಸುಂಕ ವಿಧಿಸುವ ಕಾರ್ಯನಿರ್ವಾಹಕ ಆದೇಶಕ್ಕೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸಹಿ ಹಾಕಿದ್ದಾರೆ. ಫೆಬ್ರವರಿ 24ರಿಂದ (ಭಾರತೀಯ ಕಾಲಮಾನ ಪ್ರಕಾರ ಬೆಳಿಗ್ಗೆ 10.31ರಿಂದ) ಈ ಹೊಸ ಸುಂಕ ಜಾರಿಗೆ ಬರಲಿದೆ.

ಅಂತರಾಷ್ಟ್ರೀಯ ತುರ್ತು ಆರ್ಥಿಕ ಅಧಿಕಾರ ಕಾಯ್ದೆ (ಐಇಇಕಂ) ಅಡಿಯಲ್ಲಿ ವಿಧಿಸಿದ್ದ ಹಿಂದಿನ ಸುಂಕ ಕ್ರಮವನ್ನು ಅಮೆರಿಕಾ ಸುಪ್ರೀಂ ಕೋರ್ಟ್ 6–3 ತೀರ್ಪಿನ ಮೂಲಕ ಅಮಾನ್ಯಗೊಳಿಸಿದ ಕೆಲವೇ ಗಂಟೆಗಳ ಬಳಿಕ ಟ್ರಂಪ್ ಈ ಹೊಸ ಆದೇಶಕ್ಕೆ ಸಹಿ ಹಾಕಿದ್ದಾರೆ. ಸುಪ್ರೀಂ ಕೋರ್ಟ್ ತೀರ್ಪಿನ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಟ್ರಂಪ್, “ಇದು ನಿರಾಶಾಜನಕ ತೀರ್ಪು” ಎಂದು ಹೇಳಿದ್ದಾರೆ.

ಸೆಕ್ಷನ್ 122 ಅಡಿಯಲ್ಲಿ ಹೊಸ ಸುಂಕ–ವ್ಯಾಪಾರ ಕಾಯ್ದೆ 1974ರ ಸೆಕ್ಷನ್ 122 ಅಡಿಯಲ್ಲಿ 10% ಜಾಗತಿಕ ಸುಂಕವನ್ನು ವಿಧಿಸಲಾಗಿದೆ. ಈ ಸುಂಕ ಗರಿಷ್ಠ 150 ದಿನಗಳವರೆಗೆ (ಸುಮಾರು ಐದು ತಿಂಗಳು) ಜಾರಿಯಲ್ಲಿರಬಹುದು. ಈ ಅವಧಿಯಲ್ಲಿ ಇತರೆ ದೇಶಗಳ ವಿರುದ್ಧ ನ್ಯಾಯಸಮ್ಮತ ಮತ್ತು ಪರಸ್ಪರ ವಾಣಿಜ್ಯ ನೀತಿಗಳನ್ನು ರೂಪಿಸಲು ಅಗತ್ಯ ತನಿಖೆಗಳನ್ನು ಕೈಗೊಳ್ಳಲಾಗುವುದು ಎಂದು ಟ್ರಂಪ್ ತಿಳಿಸಿದ್ದಾರೆ.‘ನಾನು ಇನ್ನಷ್ಟು ಸುಂಕ ವಿಧಿಸಲು ಕೂಡ ಅಧಿಕಾರ ಹೊಂದಿದ್ದೇನೆ,” ಎಂದು ಟ್ರಂಪ್ ಹೇಳಿದ್ದಾರೆ.

ಕೆಲವು ದೇಶಗಳು ಅಮೆರಿಕವನ್ನು ವರ್ಷಗಳ ಕಾಲ ಅನ್ಯಾಯವಾಗಿ ವರ್ತಿಸಿಕೊಂಡಿವೆ. ಅಂತಹ ದೇಶಗಳ ಮೇಲೆ ಹೆಚ್ಚುವರಿ ಸುಂಕ ವಿಧಿಸುವ ಸಾಧ್ಯತೆಯನ್ನೂ ಅವರು ಸೂಚಿಸಿದ್ದಾರೆ.

ಅನ್ಯಾಯ ವಾಣಿಜ್ಯ ಪ್ರಕ್ರಿಯೆಗಳ ವಿರುದ್ಧ ಸೆಕ್ಷನ್ 301 ಅಡಿಯಲ್ಲಿ ತನಿಖೆಗಳನ್ನು ಆರಂಭಿಸುವುದಾಗಿ ಟ್ರಂಪ್ ಘೋಷಿಸಿದ್ದಾರೆ. ಅಗತ್ಯವಿದ್ದಲ್ಲಿ ರಾಷ್ಟ್ರೀಯ ಭದ್ರತಾ ಕಾರಣಗಳನ್ನು ಉಲ್ಲೇಖಿಸಿ ಸೆಕ್ಷನ್ 232 ಅಡಿಯಲ್ಲಿ ಹೆಚ್ಚುವರಿ ಸುಂಕ ವಿಧಿಸುವ ಸಾಧ್ಯತೆಯೂ ಇದೆ. ಅಮೆರಿಕ ವಾಣಿಜ್ಯ ಪ್ರತಿನಿಧಿ ಹೊಸ 301 ತನಿಖೆಗಳ ವಿವರಗಳನ್ನು ಶೀಘ್ರದಲ್ಲೇ ಪ್ರಕಟಿಸಲಾಗುವುದು ಎಂದು ತಿಳಿಸಿದ್ದಾರೆ.

ಶ್ವೇತ ಭವನ ಬಿಡುಗಡೆ ಮಾಡಿದ ಮಾಹಿತಿ ಪತ್ರದಲ್ಲಿ, ಇಂಧನ, ಔಷಧಿ, ವಾಹನ ಮತ್ತು ಏರೋಸ್ಪೇಸ್ ಕ್ಷೇತ್ರದ ಕೆಲವು ಉತ್ಪನ್ನಗಳಿಗೆ



ವಿನಾಯಿತಿ ನೀಡಲಾಗಿದೆ ಎಂದು ತಿಳಿಸಲಾಗಿದೆ. ಪ್ರಮುಖ ಖನಿಜಗಳು, ಬಂಗಾರ ಮತ್ತು ಕರೆನ್ಸಿ ಲೋಹಗಳು, ಇಂಧನ ಸಂಬಂಧಿತ ಉತ್ಪನ್ನಗಳಿಗೆ ತಾತ್ಕಾಲಿಕ ಸುಂಕದಿಂದ ವಿನಾಯಿತಿ ನೀಡಲಾಗಿದೆ.ಕಡಿಮೆ ಮೌಲ್ಯದ ಅಂತರಾಷ್ಟ್ರೀಯ ಪೋಸ್ಟಲ್ ಸರಕುಗಳಿಗೆ ನೀಡಿದ್ದ ಡ್ಯೂಟಿ ಫ್ರೀ ಸೌಲಭ್ಯವನ್ನು ಕೂಡ ಅಮಾನತು ಮಾಡಿ, ಅವುಗಳಿಗೂ ಸೆಕ್ಷನ್ 122 ಅಡಿಯಲ್ಲಿ ಸುಂಕ ವಿಧಿಸುವಂತೆ ಮತ್ತೊಂದು ಆದೇಶ ಹೊರಡಿಸಲಾಗಿದೆ.

ಸುಪ್ರೀಂ ಕೋರ್ಟ್ ತೀರ್ಪಿನ ಪರಿಣಾಮವಾಗಿ ಕಳೆದ ಒಂದು ವರ್ಷದಲ್ಲಿ ಸಂಗ್ರಹಿಸಿದ್ದ ಸುಮಾರು 175 ಬಿಲಿಯನ್ ಡಾಲರ್‌ಗಳ ಸುಂಕ ಆದಾಯದ ಮರುಪಾವತಿ ಪ್ರಶ್ನೆ ಉದ್ಭವಿಸಿದೆ. ಈ ಬಗ್ಗೆ ನ್ಯಾಯಾಂಗ ಪ್ರಕ್ರಿಯೆ ನಡೆಯಬಹುದು ಎಂದು ಟ್ರಂಪ್ ಹೇಳಿದ್ದಾರೆ.ಅಮೆರಿಕ ಖಜಾನೆ ಕಾರ್ಯದರ್ಶಿ ಸ್ಕಾಟ್ ಬೆಸೆಂಟ್ “ಮರುಪಾವತಿ ವಿಷಯವು ವಾರಗಳು, ತಿಂಗಳುಗಳು ಅಥವಾ ವರ್ಷಗಳವರೆಗೆ ಮುಂದುವರಿಯಬಹುದು” ಎಂದು ಹೇಳಿದ್ದಾರೆ. ಆದರೆ ಹೊಸ ಸುಂಕ ಕ್ರಮಗಳಿಂದ 2026ರಲ್ಲಿಯೂ ಸುಂಕ ಆದಾಯದಲ್ಲಿ ದೊಡ್ಡ ಮಟ್ಟದ ಕುಸಿತವಾಗುವುದಿಲ್ಲ ಎಂದು ಖಜಾನೆ ಅಂದಾಜಿಸಿದೆ.

ಸುಪ್ರೀಂ ಕೋರ್ಟ್ ತೀರ್ಪಿನ ಹಿನ್ನೆಲೆಯಲ್ಲಿಯೂ ಟ್ರಂಪ್ ಆಡಳಿತವು ಸುಂಕಗಳನ್ನು ತನ್ನ ವಾಣಿಜ್ಯ ನೀತಿಯ ಪ್ರಮುಖ ಸಾಧನವಾಗಿ ಮುಂದುವರಿಸುವುದಾಗಿ ಸ್ಪಷ್ಟಪಡಿಸಿದೆ. ಹೊಸ ಕಾನೂನು ಕ್ರಮಗಳ ಮೂಲಕ ಸುಂಕ ಆದಾಯವನ್ನು ಸ್ಥಿರವಾಗಿಡಲು ಆಡಳಿತ ಸಂಕಲ್ಪಬದ್ಧವಾಗಿದೆ.

ಇದು ತಾತ್ಕಾಲಿಕ ಎಂದ ಶ್ವೇತಭವನ–ಸುಪ್ರೀಂ ಕೋರ್ಟ್ ತೀರ್ಪಿನ ಬೆನ್ನಲ್ಲೇ ಭಾರತ ಸೇರಿ ಇತರೆ ದೇಶಗಳ ಮೇಲೆ ಶೆ.10 ರಷ್ಟು ಸುಂಕ ವಿಧಿಸಿ ಟ್ರಂಪ್ ಆದೇಶಿಸಿದ್ದಾರೆ. ಈ ಹಿಂದೆ ವಿಧಿಸಿದ್ದ ಸುಂಕ ಕ್ರಮಗಳನ್ನು ರದ್ದುಗೊಳಿಸಿ ಅಮೆರಿಕ ಸುಪ್ರೀಂ ಕೋರ್ಟ್ ತೀರ್ಪು ನೀಡಿದ ಬೆನ್ನಲ್ಲೇ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಹೊಸ ಜಾಗತಿಕ ಸುಂಕ ಆದೇಶವನ್ನು ಘೋಷಿಸಿದ್ದಾರೆ. ಭಾರತ ಸೇರಿದಂತೆ ಅಮೆರಿಕ ಜೊತೆಗೆ ವ್ಯಾಪಾರ ಒಪ್ಪಂದ ಮಾಡಿಕೊಂಡಿರುವ ಇತರೆ ದೇಶಗಳ ಮೇಲೆ ತಾತ್ಕಾಲಿಕವಾಗಿ ಶೇ 10ರಷ್ಟು ಸುಂಕವನ್ನು ವಿಧಿಸಿ ಆದೇಶಿಸಿದ್ದಾರೆ ಎಂದು ಶ್ವೇತಭವನ ಸ್ಪಷ್ಟಪಡಿಸಿದೆ.

ಈ ಸುಂಕವೂ ತಾತ್ಕಾಲಿಕವಾಗಿದೆ. ಹೆಚ್ಚು ಸೂಕ್ತವಾದ ಅಥವಾ ಪೂರ್ವ ಮಾತುಕತೆಯ ಸುಂಕ ದರಗಳನ್ನು ಜಾರಿಗೆ ತರಲು ಇತರ ಕಾನೂನು ಪ್ರಕ್ರಿಯೆಗಳನ್ನು ಅನುಸರಿಸಲಿದೆ” ಎಂದು ಶ್ವೇತಭವನದ ಅಧಿಕಾರಿಗಳು ತಿಳಿಸಿದ್ದಾರೆ ಎಂದು ಎಎಫ್‌ಪಿ ವರದಿ ಮಾಡಿದೆ.ಭಾರತ ಮತ್ತು ಅಮೆರಿಕದ ನಡುವೆ ಸಾಗಿರುವ ವ್ಯಾಪಾರ ಒಪ್ಪಂದ ಅಂತಿಮ ಚೌಕಟ್ಟು ತಲುಪಿದ ಬೆನ್ನಲ್ಲೇ ಈ ತಿಂಗಳ ಆರಂಭದಲ್ಲಿ ಟ್ರಂಪ್ ಭಾರತದ ಮೇಲೆ ವಿಧಿಸಿದ್ದ ಶೇ 25ರಷ್ಟು ಸುಂಕವನ್ನು ಶೇ 18ಕ್ಕೆ ಇಳಿಸಿದ್ದರು.

ಇದೀಗ ಹೊಸ ಸುಂಕದಿಂದಾಗಿ ಭಾರತದ ಮೇಲೆ ವಿಧಿಸಿದ್ದ ಶೇ 18ರಷ್ಟು ಸುಂಕ ಶೇ 10ಕ್ಕೆ ಬರಲಿದೆ. ಈ ಕುರಿತು ಪ್ರಶ್ನೆಗೆ ಉತ್ತರಿಸಿರುವ ಶ್ವೇತ ಭವನ ಅಧಿಕಾರಿಗಳು, ತಾತ್ಕಾಲಿಕವಾಗಿ, ಹೌದು. ಹೆಚ್ಚು ಸೂಕ್ತವಾದ ಸುಂಕ ದರವನ್ನು ಜಾರಿಗೆ ತರಲು ಮತ್ತೊಂದು ಸುಂಕ ಪ್ರಾಧಿಕಾರವನ್ನು ಆಹ್ವಾನಿಸುವವರೆಗೆ ಶೇ 10ರಷ್ಟು ಸುಂಕ ಮುಂದುವರೆಯಲಿದೆ ಎಂದರು.

ಈ ನಡುವೆ ಎಲ್ಲಾ ವ್ಯಾಪಾರ ಪಾಲುದಾರರು ವ್ಯಾಪಾರ ಒಪ್ಪಂದಗಳನ್ನು ಪಾಲಿಸಬೇಕೆಂದು ಅಧಿಕಾರಿ ಕರೆ ನೀಡಿದರು. ಹೊಸ ಶೇ10ರಷ್ಟು ಜಾಗತಿಕ ಸುಂಕವು ಟ್ರಂಪ್ ಅವರ ರಕ್ಷಣಾತ್ಮಕ ವ್ಯಾಪಾರ ಕಾರ್ಯಸೂಚಿಯ ಭಾಗವಾಗಿದ್ದು, ಪಾವತಿ ಅಸಮತೋಲನ ಮತ್ತು ಅನ್ಯಾಯದ ವ್ಯಾಪಾರವನ್ನು ತಪ್ಪಿಸುವ ಗುರಿಯನ್ನು ಹೊಂದಿದೆ ಎಂದು ತಿಳಿಸಿದರು.

ಸೆಕ್ಷನ್ 122ರ ಅಡಿಯಲ್ಲಿ ಹೊಸದಾಗಿ ಘೋಷಿಸಲಾದ ಶೇಕಡಾ 10 ರಷ್ಟು ಜಾಗತಿಕ ಸುಂಕವು ಭಾರತದ ಮೇಲೆ ಈ ಹಿಂದೆ ವಿಧಿಸಲಾದ ಅಂತಾರಾಷ್ಟ್ರೀಯ ತುರ್ತು ಆರ್ಥಿಕ ಅಧಿಕಾರ ಕಾಯ್ದೆ (ಐಇಇಪಿಎ) ಸುಂಕಗಳಿಗೆ ಹೆಚ್ಚುವರಿಯಾಗಿಲ್ಲ, ಆದರೆ ಇದೀಗ ಅವುಗಳನ್ನು ಬದಲಾಯಿಸುತ್ತದೆ ಎಂದು ಶ್ವೇತ ಭವನ ಅಧಿಕಾರಿಗಳು ತಿಳಿಸಿದ್ದಾರೆ.

## ಪ್ರಚೋದನಕಾರಿ ಇನ್‌ಸ್ಟಾಗ್ರಾಂ ಪೋಸ್ಟ್: ಪ್ರಕರಣ ದಾಖಲು

**ಯಾದಗಿರಿ,ಫೆ.21–**ಜಿಲ್ಲೆಯ ಹುಣಸಗಿ ಪಟ್ಟಣದಲ್ಲಿ ಸಾಮಾಜಿಕ ಜಾಲತಾಣ ಇನ್‌ಸ್ಟಾಗ್ರಾಂನಲ್ಲಿ ಪ್ರಚೋದನಕಾರಿ ಹಾಗೂ ಧಾರ್ಮಿಕ ಭಾವನೆಗಳಿಗೆ ಧಕ್ಕೆ ತರಬಹುದಾದ ವಿಷಯವನ್ನು ಪೊ?ಸ್ಟ್ ಮಾಡಿರುವ ಘಟನೆ ಬೆಳಕಿಗೆ ಬಂದಿದೆ. ಈ ಸಂಬಂಧ ಹುಣಸಗಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

ಸಾಮಾಜಿಕ ಜಾಲತಾಣದಲ್ಲಿ ಪ್ರಚೋದನಕಾರಿ ಪೊ?ಸ್ಟ್ ಹಂಚಿಕೆಯಾಗಿದ್ದು, ಸಾರ್ವಜನಿಕ ವಲಯದಲ್ಲಿ ಆತಂಕ ಹಾಗೂ ಚರ್ಚೆಗೆ ಕಾರಣವಾಗಿದೆ. ಈ ರೀತಿಯ ಹೇಳಿಕೆಗಳು ಸಮಾಜದಲ್ಲಿ ವೈಮನಸ್ಸು ಉಂಟುಮಾಡುವ ಸಾಧ್ಯತೆ ಇರುವುದರಿಂದ ಪೊಲೀಸರು ಇದನ್ನು ಗಂಭೀರವಾಗಿ ಪರಿಗಣಿಸಿದ್ದಾರೆ.

ಅಪರಿಚಿತ ವ್ಯಕ್ತಿಯೊಬ್ಬರು “ಹುಣಸಗಿ ಭಜರಂಗದಳ” ಎಂಬ ಹೆಸರಿನಲ್ಲಿ ನಕಲಿ ಇನ್‌ಸ್ಟಾಗ್ರಾಂ ಐಡಿ ಸೃಷ್ಟಿಸಿ ಈ ಪೊ?ಸ್ಟ್ ಪ್ರಕಟಿಸಿರುವುದು ಪ್ರಾಥಮಿಕ ಪರಿಶೀಲನೆಯಲ್ಲಿ ತಿಳಿದುಬಂದಿದೆ. ಸಂಘಟನೆಯ ಹೆಸರನ್ನು ದುರುಪಯೋಗಪಡಿಸಿಕೊಂಡು ಸಮಾಜದಲ್ಲಿ ಗೊಂದಲ ಸೃಷ್ಟಿಸುವ ಯತ್ನ ನಡೆದಿರಬಹುದು ಎಂಬ ಶಂಕೆ ವ್ಯಕ್ತವಾಗಿದೆ.ಸಂಬಂಧಪಟ್ಟ ಸಂಘಟನೆಯ ಪದಾಧಿಕಾರಿಗಳು ಈ ಐಡಿಗೆ ತಮ್ಮ ಯಾವುದೇ ಸಂಬಂಧ ಇಲ್ಲವೆಂದು ಸ್ಪಷ್ಟಪಡಿಸಿದ್ದು, ಸಂಘಟನೆಯ ಹೆಸರಿಗೆ ದಕ್ಕೆ ತರುವ ಉದ್ದೇಶದಿಂದ ಕಿಡಿಗೇಡಿಗಳು ಈ ಕ್ರಮ ಕೈಗೊಂಡಿರುವ ಸಾಧ್ಯತೆ ಇದೆ ಎಂದು ತಿಳಿಸಿದ್ದಾರೆ.

ಘಟನೆಯ ಗಂಭೀರತೆಯನ್ನು ಮನಗಂಡು ಹುಣಸಗಿ ಪೊಲೀಸರು ಸ್ವಯಂ ಪ್ರೇರಿತವಾಗಿ ಪ್ರಕರಣ ದಾಖಲಿಸಿಕೊಂಡಿದ್ದಾರೆ. ತನಿಖಾಧಿಕಾರಿಯಾಗಿ ಭಾಗಣ್ಣ ಪಿ.ಎಸ್.ಐ. ಅವರನ್ನು ನೇಮಿಸಲಾಗಿದ್ದು, ಸಾಮಾಜಿಕ ಜಾಲತಾಣದ ತಾಂತ್ರಿಕ ಮಾಹಿತಿಗಳ ಆಧಾರದ ಮೇಲೆ ಆರೋಪಿಗಳ ಪತ್ತೆಗೆ ಕ್ರಮ ಕೈಗೊಳ್ಳಲಾಗಿದೆ.

ಸಾಮಾಜಿಕ ಜಾಲತಾಣಗಳನ್ನು ದುರುಪಯೋಗಪಡಿಸಿ ಸಮಾಜದಲ್ಲಿ ಅಶಾಂತಿ ಉಂಟುಮಾಡಲು ಯತ್ನಿಸುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಪೊಲೀಸ್ ಇಲಾಖೆ ತಿಳಿಸಿದೆ. ಪ್ರಕರಣದ ತನಿಖೆ ಮುಂದುವರಿದಿದ್ದು, ಆರೋಪಿಗಳ ಗುರುತು ಪತ್ತೆಯಾದ ನಂತರ ಹೆಚ್ಚಿನ ವಿವರಗಳು ಬಹಿರಂಗವಾಗುವ ನಿರೀಕ್ಷೆ ಇದೆ.

# ನಾಟಕ ನೋಡುವುದರಿಂದ ಮನುಷ್ಯರು ಯೋಚಿಸುವ ಲಹರಿ ಬದಲಾಗುತ್ತದೆ: ಅರುಂಧತಿ ನಾಗ್

**ಕಲಬುರಗಿ, ಫೆ 21:** ರಂಗಭೂಮಿಯ ಚಟುವಟಿಕೆಗಳು ಕೇವಲ ಮುಖ್ಯ ನಗರಗಳಿಗೆ ಸೀಮಿತವಾಗಿರುವ ಪ್ರಸ್ತುತ ಸಂದರ್ಭದಲ್ಲಿ ಜಿಲ್ಲಾಡಳಿತದವತಿಂದ ಕಲಬುರಗಿ ರಾಷ್ಟ್ರೀಯ ನಾಟಕೋತ್ಸವನ್ನು ಹಮ್ಮಿಕೊಳ್ಳುತ್ತಿರುವುದು ಹಾಗೂ ಅದರೊಂದಿಗೆ ನಮ್ಮ ರಂಗಶಂಕರ ಕೆಲಸ ಮಾಡುತ್ತಿರುವುದು ಸಂತಸದ ವಿಷಯ ಎಂದು ಹಿರಿಯ ರಂಗಕರ್ಮಿ ಅರುಂಧತಿ ನಾಗ್ ಅವರು ಅಭಿಪ್ರಾಯ ವ್ಯಕ್ತಪಡಿಸಿದರು.

ಕಲಬುರಗಿ ಜಿಲ್ಲಾಡಳಿತ, ಕಲಬುರಗಿ ನೆಕ್ಸ್ ಫೌಂಡೇಷನ್ ಮತ್ತು ರಂಗಶಂಕರ ಸಹಯೋಗದಲ್ಲಿ ಫೆಬ್ರವರಿ 21 ರಿಂದ 28 ರ ವರೆಗೆ ಹಮ್ಮಿಕೊಳ್ಳಲಾಗಿರುವ ಕಲಬುರಗಿ ನಾಟಕೋತ್ಸವ–26 ರ ಪೂರ್ವ ತಯಾರಿ ಕುರಿತು ಹಮ್ಮಿಕೊಳ್ಳಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ರಂಗಭೂಮಿ ಬದುಕಿನ ಪ್ರತಿರೂಪ, ನಾಟಕ ನೋಡುವುದರಿಂದ ಮನುಷ್ಯರ ಯೋಚಿಸುವ ಲಹರಿ ಬದಲಾಗುತ್ತದೆ ಎಂದು ಹೇಳಿದರು.

ರಂಗಶಂಕರಕ್ಕೀಗ 21 ವರ್ಷ, ಹವ್ಯಾಸಿ ಕರ್ಮಿಯಾಗಿ ನಂಗೆ 50 ವರ್ಷ ಪೂರೈಸುತ್ತಿರುವ ಈ ಸಮಯದಲ್ಲಿ, ರಂಗಶಂಕರ ಸಹಯೋಗದಲ್ಲಿ ಇಂತಹ ನಾಟಕೋತ್ಸವ ಹಮ್ಮಿಕೊಳ್ಳುತ್ತಿರುವುದು ನನಗೆ ವೈಯುಕ್ತಿಕವಾಗಿ ಇದೊಂದು ಕೊಡುಗೆಯಾಗಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ಇದೇ ಮೊದಲ ಬಾರಿ ನಾನು ಕಲಬುರಗಿಗೆ ಬಂದಿರುವುದು. ಬೆಂಗಳೂರಿನಲ್ಲಿರುವ ಅತ್ಯುತ್ತಮ ಕಲಾತಂಡಗಳು ಇಲ್ಲಿ ಪ್ರದರ್ಶನ ನೀಡಲಿವೆ. ಇದರ ಜೊತೆಯಲ್ಲಿ ಹಿಂದಿ ನಾಟಕಗಳು ಸಹ ಇದ್ದು ರಾಷ್ಟ್ರೀಯ ಮಟ್ಟದಲ್ಲಿ ಇಲ್ಲಿನ ಜನರಿಗೆ ರಂಗಭೂಮಿ ಅನುಭವ ನೀಡುವ ಉದ್ದೇಶ ನಮ್ಮದು.

ರಂಗಭೂಮಿಗೆ ನಾನು ಕಾಲಿಟ್ಟಾಗ ಕೇವಲ 16 ವರ್ಷ, ಶಂಕರ್ ನಾಗ್ ಅವರಿಗೆ 18 ವರ್ಷ. ಮುಂಬೈನಲ್ಲಿ ಮೊದಲ ಬಾರಿಗೆ ವಿದ್ಯಾರ್ಥಿಗಳಾಗಿ ನೋಡಿದ ನಾಟಕಗಳು ನಮ್ಮನ್ನು




ರಂಗಭೂಮಿಗೆ ಸೆಳೆತಂದವು, ನಾನು ತರಬೇತಿ ಪಡೆದ ನಟಿಯಲ್ಲ ಬಟ್ ಹವ್ಯಾಸಿ ರಂಗಭೂಮಿಯಲ್ಲಿ ಬೆಳೆದವರು. ನಾಟಕ ನೋಡುವುದರಿಂದ ಮನುಷ್ಯರ ಯೋಚಿಸುವ ಲಹರಿ ಬದಲಾಗುತ್ತದೆ. ಮೊಬೈಲ್, ಟಿವಿ, ಸಿನಿಮಾ ಬಿಟ್ಟು ನಾಟಕಗಳನ್ನು ನೋಡಿ ಎಂದು ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಪ್ರಸ್ತುತ ಸಂದರ್ಭದಲ್ಲಿ ನಾಟಕೋತ್ಸವ ಹಮ್ಮಿಕೊಳ್ಳುವ ಯೋಚನೆ ಮಾಡಿದ ಕಲಬುರಗಿ ಜಿಲ್ಲಾಡಳಿತದ ಬಗ್ಗೆ ಅಪಾರ ಗೌರವ ಇದೆ. ಸಾಮಾನ್ಯವಾಗಿ ಸರ್ಕಾರಿ ವ್ಯವಸ್ಥೆಯಲ್ಲಿ ಈ ತರಹದ ಯೋಚನೆ ಬರುವುದಿಲ್ಲ. ಆದರೆ, ಕಲಬುರಗಿ ಜಿಲ್ಲಾಡಳಿತ ಈ ರೀತಿಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ವಿಭಿನ್ನವಾಗಿದೆ ಎಂದು ಹೇಳಿದರು.

ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ಮಾತನಾಡಿ, ಕಲಬುರಗಿಯ ಸರ್ವತೋಮುಖ ಅಭಿವೃದ್ಧಿಗಾಗಿ ವಿಭಿನ್ನ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದ್ದು, ಸಾಂಸ್ಕೃತಿಕ ವಲಯದಲ್ಲಿ ಕಲಬುರಗಿ ಜನರನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಈ ನಾಟಕೋತ್ಸವವನ್ನು ಹಮ್ಮಿಕೊಳ್ಳಲಾಗಿದ್ದು, ಮುಂದೆ ಚಲನಚಿತ್ರೋತ್ಸವ ಹಾಗೂ ಸಾಹಿತ್ಯೋತ್ಸವಗಳನ್ನು ಹಮ್ಮಿಕೊಳ್ಳಲು ಯೋಜಿಸಲಾಗಿದೆ ಎಂದರು.

ಜಿಲ್ಲಾಡಳಿತದವತಿಯಿಂದ ಮೊದಲ ಬಾರಿಗೆ ಹಮ್ಮಿಕೊಳ್ಳಲಾಗಿರುವ ಈ ನಾಟಕೋತ್ಸವ ಪ್ರಚಾರಕ್ಕಾಗಿ ವಿಶೇಷ ರ್ಯಾಲಿ ಮತ್ತು ಜಾಥಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಪ್ರತಿದಿನ ಸಂಜೆ 7 ಗಂಟೆಗೆ ಎಸ್ ಎಮ್ ಪಂಡಿತ್ ರಂಗಮಂದಿರದಲ್ಲಿ ನಾಟಕ ಪ್ರದರ್ಶನ ಆರಂಭಗೊಳ್ಳುವ ಮುನ್ನಾ ಬೀದಿನಾಟಕ, ಜಾನಪದ ಹಾಡುಗಳು ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಡಾ. ಎಸ್.ಎಂ. ಪಂಡಿತ್ ರಂಗಮಂದಿರದಲ್ಲಿ ನಡೆಯುವ ನಾಟಕಗಳಿಗೆ 8 ವರ್ಷದ ಒಳಗಿನ ಮಕ್ಕಳಿಗೆ ಅವಕಾಶವಿಲ್ಲ. ಒಬ್ಬರಿಗೆ ಒಂದು ನಾಟಕಕ್ಕೆ ನೂರು ರೂಪಾಯಿ ಟಿಕೇಟ್ ನಿಗಧಿಪಡಿಸಲಾಗಿದ್ದು, ಟಿಎಟ್ ಆನ್ ಲೈನ್ ನಲ್ಲಿ ಸಹ ಖರೀದಿಸಬಹುದಾಗಿದೆ ಹಾಗೂ ಸ್ಥಳದಲ್ಲಿ ಸಹ ಅವಕಾಶ ಕಲ್ಪಿಸಲಾಗಿದೆ. ಮಕ್ಕಳಿಗಾಗಿ ಕಲಬುರಗಿ ರಂಗಾಯಣದಲ್ಲಿ ಬೆಳಿಗ್ಗೆ 11 ಗಂಟೆಗೆ ವಿಶೇಷ ನಾಟಕಗಳನ್ನು ಹಮ್ಮಿಕೊಳ್ಳಲಾಗಿದೆ. ಜಿಲ್ಲಾ ಕನ್ನಡ ಸಾಹಿತ್ಯ ಭವನದಲ್ಲಿ ರಂಗಭೂಮಿಗೆ ಸಂಬಂಧಿಸಿದಂತೆ ಸಂವಾದಗಳನ್ನು ಪ್ರತಿದಿನ ಬೆಳಿಗ್ಗೆ 11 ಕ್ಕೆ ಆರಂಭವಾಗಲಿವೆ.

ಕಲಬುರಗಿಯ ಜನರು ಹೆಚ್ಚಿನ ಸಂಖ್ಯೆಯಲ್ಲಿ ಈ ನಾಟಕೋತ್ಸವದಲ್ಲಿ ಭಾಗವಹಿಸುವ ಮೂಲಕ ಯಶಸ್ವಿಗೊಳಿಸ ‘ಬೇಕು ಎಂದು ಮನವಿ ಮಾಡಿದರು.

ರಂಗಶಂಕರದ ಹಿರಿಯ ಸದಸ್ಯ ಹಾಗೂ ರಂಗಕರ್ಮಿ ಸುರೇಂದ್ರನಾಥ ಅವರು ಮಾತನಾಡಿ ಕಲಬುರಗಿ ನಾಟಕೋತ್ಸವಕ್ಕೆ ನಮ್ಮ ರಾಜ್ಯದ ಹಾಗೂ ಇತರೆ ಭಾಷೆಗಳ ಅತ್ಯುತ್ತಮ ನಾಟಕಗಳನ್ನು ಆಯ್ಕೆ ಮಾಡಲಾಗಿದೆ. ಈ ಮಣ್ಣಿಗೆ ಹತ್ತಿರವಿರುವ ಕಥಾ–ವಸ್ತು ಹೊಂದಿರುವ ನಾಟಕಗಳನ್ನು ಕರೆಸಲಾಗುತ್ತಿದೆ ಎಂದರು.

ಕಲಬುರಗಿಯಲ್ಲಿ ರಂಗಶಂಕರ ಸಂಸ್ಥೆಯೊಂದಿಗೆ ಒಡಂಬಡಿಕೆ ಮಾಡಿಕೊಂಡು ಮುಂದಿನ 5 ವರ್ಷಗಳ ಕಾಲ ನಾಟಕೋತ್ಸವ ವನ್ನು ಹಮ್ಮಿಕೊಳ್ಳಲು ಯೋಜನೆ ರೂಪಿಸಲಾಗಿದ್ದು, ಈ ಯೋಜನೆಯ ಯಶಸ್ಸಿಗೆ ಶ್ರಮಿಸುವ ಮೂಲಕ ಕಲಬುರಗಿ ಜನರಿಗೆ ನಾಡಿನ ಅತ್ಯುತ್ತಮ ನಾಟಕಗಳನ್ನು ತೋರಿಸುವ ಮೂಲಕ ಇಲ್ಲಿನ ಜನರ ಅಭಿರುಚಿಯನ್ನು ಹೆಚ್ಚಿಸಲಾಗುವುದು ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಸಹಾಯಕ ಆಯುಕ್ತರಾದ ಸಾಹಿತ್ಯ, ಕಲಬುರಗಿ ರಂಗಾಯಣದ ನಿರ್ದೇಶಕಿ ಸುಜಾತ ಜಂಗಮಶೆಟ್ಟಿ ಅವರು ಉಪಸ್ಥಿತರಿದ್ದರು.

# ಅಂಬೇಡ್ಕರ್ ಸಂವಿಧಾನದಿಂದ ಎಲ್ಲ ಸಮುದಾಯಗಳಿಗೂ ಸಮಾನ ಅವಕಾಶ

**ಬಳ್ಳಾರಿ, ಫೆ.21**: ಪ್ರಸ್ತುತ ಸಮಾಜಕ್ಕೆ ಡಾ. ಬಿ.ಆರ್. ಅಂಬೇಡ್ಕರ್ ನೀಡಿರುವ ಸಂವಿಧಾನವು ಎಲ್ಲ ಸಮುದಾಯಗಳಿಗೂ ವಿದ್ಯೆ, ಉದ್ಯೋಗ, ರಾಜಕೀಯ ಸೇರಿ ಎಲ್ಲ ಕ್ಷೇತ್ರಗಳಲ್ಲೂ ಸಮಾನ, ನ್ಯಾಯಯುತ ಅವಕಾಶಗಳನ್ನು ಕಲ್ಪಿಸಿದೆ ಎಂದು ತಾಲೂಕಿನ ಮೋಕಾ ಠಾಣೆ ಪಿಎಐ ಎ.ಕಾಳಿಂಗ ಅಭಿಪ್ರಾಯ ಪಟ್ಟರು.

ಅವರು ನಿನ್ನೆ ತಾಲೂಕಿನ ಮೊರಾರ್ಜಿ ದೇಸಾಯಿ ವಸತಿ ಮೋಕ ಶಾಲೆಯಲ್ಲಿ ( ಬಿ.ಡಿ.ಹಳ್ಳಿ) ಹಂದ್ಯಾಳು ಶ್ರೀ ಮಹದೇವ ತಾತ ಕಲಾ ಸಂಘ ಆಯೋಜಿಸಿದ್ದ. ಗೀತ ಗಾಯನ ಮತ್ತು ರಮಾಬಾಯಿ ಅಂಬೇಡ್ಕರ್ ನಾಟಕ ಪ್ರದರ್ಶನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು, ಅಂಬೇಡ್ಕರ್ ಅವರ ಸಾಧನೆಯಲ್ಲಿ ರಮಾಬಾಯಿ ಅವರ ಪಾತ್ರ ಸರ್ವ ಶ್ರೇಷ್ಟವಾದದ್ದು, ಅಂಬೇಡ್ಕರ್ ಅವರ ಸಂವಿಧಾನದಿಂದಲೇ ನಾನು ಇಂದು ಈ ಸ್ಥಾನ ದೊರೆತಿದೆ ಎಂದರು.ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಲೇಖಕ ಭುವನೇಶ್ ಕುಂಬಾರ ಅವರು ಮಾತನಾಡಿ, ಇಂತಹ ನಾಟಕಗಳು ಮಕ್ಕಳಲ್ಲಿ ಜ್ಞಾನದ ಜೊತೆಗೆ ತ್ಯಾಗದ ಮನೋಭಾವವನ್ನು ಹೆಚ್ಚಿಸುತ್ತವೆ ಎಂದರು.ಶ್ರೀ ಮಹದೇವ ತಾತ ಕಲಾ ಸಂಘದ ಅಧ್ಯಕ್ಷ ಪುರುಷೋತ್ತಮ ಹಂದ್ಯಾಳು ಅವರು ಮಾತನಾಡಿ, ಜೀವನದ ಪಾಠ ಕಲಿಯಲು ರಂಗಭೂಮಿ ದಾರಿದೀಪವಾಗುತ್ತದೆ. ಶಾಲಾ ಮಕ್ಕಳಿಗೆ ಇಂತಹ ಮಹಾನ್ ನಾಯಕರ ನಾಟಕಗಳು ಅತ್ಯವಶ್ಯಕ. ಮಕ್ಕಳಲ್ಲಿ ಅರಿವು ಮೂಡಿಸುವ ಹಿನ್ನೆಲೆಯಲ್ಲಿ ನಮ್ಮ



ಸಂಘದಿಂದ ಇಂತಹ ನಾಟಕ ಪ್ರದರ್ಶನ ಆಯೋಜಿಸಲಾಗಿದೆ ಎಂದರು.ಅಧ್ಯಕ್ಷತೆ ವಹಿಸಿದ್ದ ಮೊರಾರ್ಜಿ ವಸತಿ ಶಾಲೆ ಪ್ರಾಂಶುಪಾಲರಾದ ಅನುಸೂಯ.ಕೆ ಮಾತನಾಡಿ, ಇಂತಹ ನಾಟಕಗಳ ಪ್ರದರ್ಶನದಿಂದ ಮಕ್ಕಳಲ್ಲಿ ವೈಚಾರಿಕ ಮನೋಭಾವ ಬೆಳೆಯುತ್ತದೆ ಎಂದರು.

ಅಕ್ಷತಾ ಹಾಗು ಸಂಧ್ಯಾ ತಂಡದವರು ಗೀತಗಾಯನ ಪ್ರಸ್ತುತ ಪಡಿಸಿದರು, ಸಂಗಮ ಕಲಾ ತಂಡ ಬಾಗಲಕೋಟೆ ಅವರು ಮಕ್ಕಳಿಗೆ ಹಾಗು ಸಭಿಕರಿಗೆ ಮನ ಮುಟ್ಟುವಂತೆ ಅಭಿನಯಿಸಿ ಮೆಚ್ಚುಗೆ ವ್ಯಕ್ತಪಡಿಸಿದರು.ರಂಗ ಕಲಾವಿದ ನೆರವು ಗಣಕರಂಗ ಧಾರವಾಡ , ವಿನ್ಯಾಸ ಮತ್ತು ನಿರ್ದೇಶನ ಶ್ರೀಕಾಂತ ನವಲಗಿರಿ, ಗೌರಿ ಮತ್ತು ಶಿವಕುಮಾರ್ ಕಾರ್ಯಕ್ರಮ ನಿರೂಪಿಸಿದರು

## ಟ್ರ್ಯಾಕ್ಟರ್ ಪಲ್ಟಿ: ಎರಡು ವರ್ಷದ ಮಗು ಸೇರಿ ನಾಲ್ವರ ಸಾವು

**ಜಮಖಂಡಿ,ಫೆ.21:** ಪಟ್ಟಣದ ಮುಧೋಳ ದಿನ್ನಿಯ ಕಟ್ಟೆ ಮೇಲಿಂದ ಟ್ರ್ಯಾಕ್ಟರ ಪಲ್ಟಿಯಾಗಿ ಸ್ಥಳದಲ್ಲಿ ಎರಡು ವರ್ಷದ ಮಗು ಸೇರಿ 4 ಜನರು ಮೃತಪಟ್ಟಿರುವ ಘಟನೆ ಜರುಗಿದೆ. ಮೃತರನ್ನು ಮಹಾರಾಷ್ಟ್ರ ರಾಜ್ಯದ ಯೋತಮಾಳ ಜಿಲ್ಲೆಯ ಪುಸದ ತಾಲೂಕಿನ ಗೋಪವಾಡಿ ಗ್ರಾಮದ ಮನಿಷಾ ಪಾಂಡೆ (23)ಹಲಕಿ ಪಾಂಡೆ (2)ಲಕ್ಷ್ಮೀ ಚಿರಮಡಿ,(25)ರೇಖಾ ಭುಕೆ ಎಂದು ಗುರುತಿಸಲಾಗಿದೆ. ಯರಗಟ್ಟಿ ತಾಲೂಕಿನಲ್ಲಿ ಕಬ್ಬು ಕಟಾವು ಕಾರ್ಯ ಮುಗಿಸಿಕೊಂಡು ಜಮಖಂಡಿ ಮಾರ್ಗವಾಗಿ ಮರಳಿ ತಮ್ಮ ಸ್ವಗ್ರಾಮಕ್ಕೆ ಹೊಗುವ ಸಂಧರ್ಭದಲ್ಲಿ ಮುಧೋಳ ಹಿಲ್ಲ ಮೇಲೆ ಈ ಘಟನೆ ಜರುಗಿದೆ. ಮೂವರ ಆರೋಗ್ಯ ಚಿಂತಾಜನಕವಾಗಿದ್ದು ಅವರನ್ನು ಹೆಚ್ಚಿನ ಚಿಕಿತ್ಸೆಗಾಗಿ ಖಾಸಗಿ ಆಸ್ಪತ್ರೆಗೆ ರವಾನಿಸಲಾಗಿದೆ. 20ಕ್ಕೂ ಅಧಿಕ ಜನರಿಗೆ ಸರಕಾರಿ ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಸ್ಥಳಕ್ಕೆ ಜಿಲ್ಲಾ ವರಿಷ್ಠಾಧಿಕಾರಿ ಸಿದ್ಧಾರ್ಥ್ ಗೋಯಲ್,ಸಿಪಿಐ ಮಲ್ಲಪ್ಪ ಮಡ್ಡಿ, ಪಿಎಸೈ ಅನೀಲ ಕುಂಬಾರ ಅವರ ಪೊಲಿಸ್ ತಂಡ ಆಗಮಿಸಿ ಪರಿಶೀಲನೆ ನಡೆಸಿದ್ದಾರೆ

ಟ್ರ್ಯಾಕ್ಟರ್ ಅನ್ನು ಕ್ರೇನ್ ಮೂಲಕ ಹೊರ ತೆಗೆದು ಮೃತದೇಹವನ್ನು ಶವ ಪರೀಕ್ಷೆಗಾಗಿ ಸರಕಾರಿ ಸಾರ್ವಜನಿಕ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ .

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE